ಸಂಪುಟ : 10 ಸಂಚಿಕೆ: 74 ಪುಟ : 4+2 ಬೆಲೆ: 3.00 ರವಿವಾರ ಎಪ್ರಿಲ್ 20 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 74 Pages : 4+2 Price : 3.00 Sunday April 20 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಮುಳಗುಂದ ಪಟ್ಟಣದಲ್ಲಿ ಜಿಲ್ಲಾ ಮಟ್ಟದ 'ಜನತಾ ದರ್ಶನ'ಕ್ಕೆ ಚಾಲನೆ ನೀಡಿದ ಸಚಿವ ಎಚ್.ಕೆ. ಪಾಟೀಲ

# ಜನಪರ ಆಡಳಿತವೇ ಸರ್ಕಾರದ ಗುರಿ

■ವಿಜಯಸಾಕ್ಷಿ ಸುದ್ದಿ, ಗದಗ

ಜನತಾ ದರ್ಶನ ಎಂಬುದು ಒಂದು ರೀತಿಯ ಬಹಿರಂಗ ಸಂಸತ್ ಅಧಿವೇಶನವಾಗಿದೆ. ಜನಸಾಮಾನ್ಯರು ತಮ್ಮ ಅಹವಾಲುಗಳನ್ನು ನೇರವಾಗಿ ಮಂಡಿಸಬಹುದಾದ ವೇದಿಕೆಯಾಗಿ ಜನತಾ ದರ್ಶನ ರೂಪುಗೊಂಡಿದ್ದು, ಮುಳಗುಂದದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ, ಸಾರ್ವಜನಿಕರಿಂದ ಆಗಮಿಸಿದ ಹಲವಾರು ಅರ್ಜಿಗಳಿಗೆ ಸ್ಥಳದಲ್ಲೇ ಸ್ಪಂದನೆ ಸಿಗಲಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ ಹೇಳಿದರು.

ಮುಳಗುಂದ ಪಟ್ಟಣದಲ್ಲಿ ಶನಿವಾರ ನಡೆದ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡುತ್ತಿದ್ದರು.

ಗದಗ ಜಿಲ್ಲೆ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ



ಶೇ.98ರಷ್ಟು ಸಾಧನೆ ಮಾಡಿದ್ದು, ಇದು ರಾಜ್ಯ ಮಟ್ಟದಲ್ಲಿ ಮಾದರಿಯಾಗಿದೆ. ಪ್ರತಿ ಕುಟುಂಬಕ್ಕೆ ತಿಂಗಳಿಗೆ ರೂ. 6,000 ಮೌಲ್ಯದ ಸೌಲಭ್ಯಗಳು ತಲುಪುತ್ತಿವೆ. ಇದು ದೇಶದ ಮಟ್ಟದಲ್ಲಿ ಕ್ರಾಂತಿಕಾರಿಯಾದ ಹೆಜ್ಜೆಯಾಗಿದೆ. ರಾಜ್ಯದಲ್ಲಿ ಇದುವರೆಗೆ 54 ಸಾವಿರ ಕೋಟಿ ರೂ. ಖರ್ಚುಮಾಡಿ ಭ್ರಷ್ಟಾಚಾರ ರಹಿತವಾಗಿ ಈ ಯೋಜನೆ ಅನುಷ್ಠಾನಗೊಳ್ಳುತ್ತಿದೆ ಎಂದರು.

ಅಧಿಕಾರಿಗಳು ಪ್ರಜೆಗಳನ್ನು ಮೇಲಿಂದ ಮೇಲೆ ನೋಡುವ ಮನೋಭಾವ ಬದಲಾಗಬೇಕು. ಪ್ರಜೆಗಳೇ ಪ್ರಭುಗಳು. ಸಂವಿಧಾನ ನಮಗೆ ಅಧಿಕಾರ ನೀಡಿದ್ದು ಸೇವೆಗಾಗಿ, ದರ್ಪ ತೋರಿಸಲು ಅಲ್ಲ. ಸೌಜನ್ಯ ಹಾಗೂ ಸಹಾನುಭೂತಿಯೊಂದಿಗೆ ಆಡಳಿತ ನಡೆಯಬೇಕು ಎಂಬ ಆಶಯವನ್ನೂ ಸಚಿವರು ವ್ಯಕ್ತಪಡಿಸಿದರು.

ಜಿಲ್ಲೆಯಲ್ಲಿ 'ಥರ್ಡ್ ಐ' ತಂತ್ರಜ್ಞಾನದ ಮೂಲಕ ಸಂಚಾರಿ ನಿಯಮಗಳ ಪಾಲನೆ, ಪೊಲೀಸ್ ಮತ್ತು ನಾಗರಿಕರ ನಡುವೆ ಸದ್ಭಾವನೆಯ ಆಧಾರಿತ ಸಂಬಂಧ, ಅಪರಾಧ ನಿಯಂತ್ರಣದತ್ತ ಗದಗ ಜಿಲ್ಲೆಯ ಪೊಲೀಸ್ ಇಲಾಖೆಯ ಸಾಧನೆ ಹಿಗ್ಗಿ ಹೇಳುವಂತಿದೆ. ಈ ಹಿನ್ನೆಲೆಯಲ್ಲಿ ಗೃಹ ಸಚಿವರು 4–5 ಬಾರಿ ಗದಗ ಪೊಲೀಸರನ್ನು ಪ್ರಶಂಸಿಸಿದ್ದಾರೆ ಎಂದು ಸಚಿವರು ಹೆಮ್ಮೆ ವ್ಯಕ್ತಪಡಿಸಿದರು.

> ಸರ್ಕಾರದ ಸೌಲಭ್ಯಗಳು ನೇರವಾಗಿ ಅರ್ಹ ಫಲಾನುಭವಿಗಳಿಗೆ ಲಭ್ಯವಾಗಬೇಕು, ದಲ್ಲಾಳಿಗಳ ಮಧ್ಯಪ್ರವೇಶ ಇಲ್ಲದ ನೈಜ ಜನಪರ ಆಡಳಿತವೇ ಸರ್ಕಾರದ ಗುರಿಯಾಗಿದೆ. ಹಿಂದಿನ ಜನತಾ ದರ್ಶನಗಳಲ್ಲಿ 951 ಅರ್ಜಿಗಳು ಪ್ರಥಮ ಹಂತದಲ್ಲಿ, 352 ಅರ್ಜಿಗಳು ದ್ವಿತೀಯ ಹಂತದಲ್ಲಿ ಮತ್ತು 855 ಅರ್ಜಿಗಳು ತೃತೀಯ ಹಂತದಲ್ಲಿ ಸ್ವೀಕೃತವಾಗಿವೆ. ಎಲ್ಲಾ ಅಹವಾಲುಗಳು ತಾರ್ಕಿಕವಾಗಿ ಅಂತ್ಯಗೊಳಿಸಲ್ಪಟ್ಟಿವೆ.
>
> – ಎಚ್.ಕೆ. ಪಾಟೀಲ.
>
> ಜಿಲ್ಲಾ ಉಸ್ತುವಾರಿ ಸಚಿವರು, ಗದಗ.



**ಜನತಾ ದರ್ಶನದಲ್ಲಿ 287 ಅರ್ಜಿಗಳ ಸ್ವೀಕೃತಿ**

ಗದಗ–257, ರೋಣ–03, ಗಜೆಂದ್ರಗಡ–01 ಶಿರಹಟ್ಟಿ–09, ಮುಂಡರಗಿ–07, ಲಕ್ಷ್ಮೇಶ್ವರ–10, ನರಗುಂದ–00 ಹೀಗೆ ಒಟ್ಟು 287 ಅರ್ಜಿಗಳು ಸ್ವೀಕೃತವಾಗಿದ್ದು, ಇವುಗಳೆಲ್ಲವನ್ನು ಆದ್ಯತೆ ಅನುಸಾರ ಇತ್ಯರ್ಥ ಮಾಡಲಾಗುವುದು. ಒಟ್ಟಾರೆ ಅರ್ಜಿ ಹಿಡಿದು ಬರುವ ಸಾರ್ವಜನಿಕರಿಗೆ ಪರಿಹಾರ ನೀಡುವದು ಸರ್ಕಾರದ ಉದ್ದೇಶವಾಗಿದೆ ಎಂದು ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ ತಿಳಿಸಿದ್ದಾರೆ.

ಕಳೆದ 75 ವರ್ಷಗಳಲ್ಲಿ ಅಸಾಧ್ಯವಾಗಿದ್ದ ಎಲ್ಲಾ ಗ್ರಾಮಗಳಿಗೆ ಸ್ಮಶಾನ ನಿರ್ಮಾಣದ ಗುರಿ ಇಂದು ಸಾಕಾರವಾಗುತ್ತಿದೆ. ಗದಗ ವಿಧಾನಸಭಾ ಕ್ಷೇತ್ರದ ಎಲ್ಲ ಗ್ರಾಮಗಳಿಗೆ ಸ್ಮಶಾನಗಳನ್ನು ಕಲ್ಪಿಸಲಾಗಿದೆ. ಗದಗ ಜಿಲ್ಲೆಯಲ್ಲಿ ಮುಂದಿನ ಹಂತದಲ್ಲಿ ಎಲ್ಲ ಗ್ರಾಮಗಳಿಗೂ ಸ್ಮಶಾನ ಒದಗಿಸುವ ಗುರಿ ಹೊಂದಲಾಗಿದೆ. ಈ ದಿಸೆಯಲ್ಲಿ ಅಧಿಕಾರಿಗಳು ಕಾರ್ಯ ನಿರ್ವಹಿಸಲಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುಳಗುಂದ ಪ.ಪಂ ಅಧ್ಯಕ್ಷೆ ಯಲ್ಲಮ್ಮ, ಸದಸ್ಯರಾದ ಷಣ್ಮುಖಪ್ಪ, ಬಸವರಾಜ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ್ ಬಬರ್ಚಿ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಎಸಿ ಗಂಗಪ್ಪ, ಡಿಸಿಎಫ್ ಸಂತೋಷಕುಮಾರ್ ಹಾಗೂ ಇತರ ಅಧಿಕಾರಿಗಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದಲ್ಲಿ ಎಪ್ರಿಲ್ 20 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 6, 5, ರೇಣುಕಾಚಾರ್ಯ ಕಲ್ಯಾಣ ಮಂಟಪ, ಉಳಿದ ವಿವಿಧ ಭಾಗಗಳು, ವಾರ್ಡ್ ನಂ. 23, 20, 25 ರಲ್ಲಿ ಜಂತ್ಲಿ ಓಣಿ, ಕುಂಬಾರ ಓಣಿ, ದ್ಯಾಮವ್ವನ ಕಟ್ಟಿ, ಕೆರಕಲಮಟ್ಟಿ, ಸಿ.ಟಿ.ಹಾಲ್, ಪಲ್ಲೇದವರ ಓಣಿ, 2 ನಂ. ಶಾಲೆ, ಪಡಗದವರ ಭಾಗ–2, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 16ರಲ್ಲಿ ಹೊಂಬಳ ನಾಕಾ ಜನತಾ ಕಾಲೋನಿ, ಶೌಚಾಲಯ ಕಟ್ಟಿಗೆ ಅಡ್ಡೆ, ಮಸೂತಿ ಭಾಗಗಳು, ವಾರ್ಡ್ ನಂ. 27ರಲ್ಲಿ ಫಾರ್ಮ್ ಓಣಿ, ಪೂರ್ತಿ ಭಾಗಗಳು, ವಾರ್ಡ್ ನಂ. 4ರಲ್ಲಿ ಹುಯಿಲಗೋಳ ರಸ್ತೆಯ ಬಲಭಾಗ 200 ಮನೆ, 270 ಮನೆ, ಮಂಜುನಾಥ ನಗರ, ಕಣವಿ ಪ್ಲಾಟ್ ಭಾಗಗಳು.

**ಪ್ರಕಟಣೆ:** ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಲಾಗಿದೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಮಾನತೆ ರಥಯಾತ್ರೆ, ಸಮಾನತೆ ಬುತ್ತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಬಿ.ಶ್ರೀರಾಮುಲು

# ಸಮಾನತೆ ಮಂದಿರದ ಕಲ್ಪನೆ ಅದ್ಭುತ

■ವಿಜಯಸಾಕ್ಷಿ ಸುದ್ದಿ, ಗದಗ

ದೇಶದಲ್ಲೇ ಪ್ರಥಮ ಬಾರಿಗೆ 'ಸಮಾನತೆ ಮಂದಿರ' ಗದಗ ಜಿಲ್ಲೆಯ ಕುರ್ತಕೋಟಿ ಗ್ರಾಮದಲ್ಲಿ ಸ್ಥಾಪನೆ ಆಗುತ್ತಿರುವುದು ಜಿಲ್ಲೆಯ ಜನರು ಹೆಮ್ಮೆ ಪಡುವ ವಿಷಯವಾಗಿದೆ. ಯುವ ಮುಖಂಡ ಅನಿಲ ಪಿ.ಮೆಣಸಿನಕಾಯಿ ಹೊಸ–ಹೊಸ ಆವಿಷ್ಕಾರದ ವಿಷಯ ಹುಡುಕುವಲ್ಲಿ ನಿಪುಣರಾಗಿದ್ದಾರೆ. ಸಮಾನತೆ ಮಂದಿರ ನಿರ್ಮಿಸುವ ಕಲ್ಪನೆ ಅವರಲ್ಲಿ ಬಂದಿದ್ದು ಅದ್ಭುತ ಅನುಭವವಾಗಿದೆ ಎಂದು ಮಾಜಿ ಉಪಮುಖ್ಯಮಂತ್ರಿ ಬಿ.ಶ್ರೀರಾಮುಲು ಅಭಿಪ್ರಾಯಪಟ್ಟರು. ದೇಶದಲ್ಲಿ ಅಸಮಾನತೆಯನ್ನು ಹೋಗಲಾಡಿಸುವ ಉದ್ದೇಶದಿಂದ 'ಮಾನವ ಕುಲಕ್ಕೆ ಜಯವಾಗಲಿ' ಎನ್ನುವ ಧ್ಯೇಯದೊಂದಿಗೆ ಯುವ ಮುಖಂಡ ಅನಿಲ ಪಿ.ಮೆಣಸಿನಕಾಯಿ ನೇತೃತ್ವದಲ್ಲಿ ಹಮ್ಮಿಕೊಂಡಿರುವ ಸಮಾನತೆ ರಥಯಾತ್ರೆ, ಸಮಾನತೆ ಬುತ್ತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡುತ್ತಿದ್ದರು.



ಸಮಾಜಕ್ಕೆ ವಿಶೇಷ ಸೇವೆ ಸಲ್ಲಿಸಬೇಕು ಎನ್ನುವ ಕಿಚ್ಚು ಅನಿಲ ಮೆಣಸಿನಕಾಯಿ ಅವರಲ್ಲಿ ಅಡಗಿದೆ. ಚುನಾವಣೆಯಲ್ಲಿ ಅವರು ಪರಾಭವಗೊಂಡರೂ ಎದೆಗುಂದದೇ ಸಮಾನತೆ ಮಂದಿರ ನಿರ್ಮಿಸುವ ಸಂಕಲ್ಪದೊಂದಿಗೆ ಮತ್ತೊಮ್ಮೆ ಜನ–ಮನದಲ್ಲಿ ಅಚ್ಚಳಿಯದೇ ಉಳಿಯುವ ಕೆಲಸ ಮಾಡುತ್ತಿದ್ದಾರೆ. ಅವರ ಈ ಕಾರ್ಯಕ್ಕೆ ಕರ್ನಾಟಕದಾದ್ಯಂತ ವ್ಯಾಪಕ ಮೆಚ್ಚುಗೆ ವ್ಯಕ್ತವಾಗುತ್ತಿದ್ದು, ನಾವೆಲ್ಲರೂ ಅವರ ಜೊತೆಗಿದ್ದೇವೆ ಎಂದು ಭರವಸೆ ನೀಡಿದರು.ಈ ವೇಳೆ ಮಾಜಿ ಸಚಿವ, ನರಗುಂದ ಮತಕ್ಷೇತ್ರದ ಶಾಸಕ ಸಿ.ಸಿ ಪಾಟೀಲ, ಶಿರಹಟ್ಟಿ ಮತಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ, ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಪದ್ಮಶ್ರೀ ಪುರಸ್ಕೃತೆ ಮಂಜಮ್ಮ ಜೋಗತಿ, ಸಿದ್ದಣ್ಣ ಪಲ್ಲೇದ, ಸಂಗಮೇಶ ದುಂದೂರ, ನಗರಸಭೆ ಮಾಜಿ ಅಧ್ಯಕ್ಷೆ ಉಷಾ ದಾಸರ, ನಗರಸಭೆ ಸದಸ್ಯ ರಾಘವೇಂದ್ರ ಯಳವತ್ತಿ, ಎಂ.ಎಂ. ಹಿರೇಮಠ, ರವಿಕಾಂತ ಅಂಗಡಿ, ಪರಮೇಶ ನಾಯಕ, ಉಮೇಶ ಹಡಪದ, ನಗರಸಭೆ ಮಾಜಿ ಅಧ್ಯಕ್ಷ ಶಿವಣ್ಣ ಮುಳಗುಂದ, ಉಡಚಪ್ಪ ಹಳ್ಳಿಕೇರಿ, ವಿನಾಯಕ ಮಾನ್ವಿ, ಅಯ್ಯಪ್ಪ ಅಂಗಡಿ, ರುದ್ರಣ್ಣ ಗುಳಗುಳಿ, ನಿರ್ಮಲಾ ಕೊಳ್ಳಿ, ಶ್ವೇತಾ ದಂಡಿನ, ವಿಜಯಲಕ್ಷ್ಮೀ ದಿಂಡೂರ, ವಿಜಯಲಕ್ಷ್ಮೀ ಮಾನ್ವಿ, ಸ್ವಾತಿ ಅಕ್ಕಿ, ಶಾರದಾ ಹಿರೇಮಠ, ಅನಿಲ ಅಬ್ಬಿಗೇರಿ, ಕಿಸನ್ ಮೇರವಾಡೆ, ಮುತ್ತಣ್ಣ ಮುಶಿಗೇರಿ, ಪ್ರಕಾಶ ಅಂಗಡಿ, ವಸಂತ ಪಡಗದ ಮುಂತಾದವರು ಪಾಲ್ಗೊಂಡಿದ್ದರು.

> ಬುದ್ಧ, ಬಸವ, ಅಂಬೇಡ್ಕರ್, ಶರೀಫಜ್ಜ, ಶ್ರೀರಾಮ, ಮಹರ್ಷಿ ವಾಲ್ಮೀಕಿ, ಭಕ್ತ ಕನಕದಾಸರು ಸೇರಿದಂತೆ ಹಲವಾರು ದಾರ್ಶನಿಕರು ಸಮಾಜದಲ್ಲಿನ ಅಸಮಾನತೆ ಹೋಗಲಾಡಿಸುವಲ್ಲಿ ಶ್ರಮ ವಹಿಸಿದ್ದರು. ಆದರೆ, ಅಸಮಾನತೆ ಇನ್ನೂ ತಾಂಡವವಾಡುತ್ತಿದೆ. ಇದನ್ನು ಹೋಗಲಾಡಿಸಲು ಸಮಾನತೆ ಮಂದಿರ ನಿರ್ಮಿಸಲು ಪಣ ತೊಡಲಾಗಿದೆ. ಈ ವಿಶೇಷ ಕಾರ್ಯಕ್ಕೆ ಪಕ್ಷಾತೀತವಾಗಿ, ಜಾತ್ಯಾತೀತವಾಗಿ ಎಲ್ಲ ನಾಯಕರು ಸಹಕಾರ ನೀಡುತ್ತಿದ್ದಾರೆ.
>
> – ಅನಿಲ ಪಿ.ಮೆಣಸಿನಕಾಯಿ.
>
> ಸಮಾನತೆ ಮಂದಿರದ ರೂವಾರಿ.

### ಅಂಜುಮನ್ ಸಂಸ್ಥೆ ನೇತೃತ್ವದಲ್ಲಿ ವಕ್ಫ್ ತಿದ್ದುಪಡಿ ಕಾಯ್ದೆ ವಿರೋಧಿಸಿ ಪ್ರತಿಭಟನೆ

# ವಿವಾದಾತ್ಮಕ ವಕ್ಫ್ ತಿದ್ದುಪಡಿ ಕಾಯ್ದೆ ಹಿಂಪಡೆಯಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರ ಜಾರಿಗೆ ತಂದಿರುವ ವಕ್ಫ್ ತಿದ್ದುಪಡಿ ಕಾಯ್ದೆ ವಿರೋಧಿಸಿ ಗದಗ–ಬೆಟಗೇರಿ ಅಂಜುಮನ್–ಎ–ಇಸ್ಲಾಂ ಸಂಸ್ಥೆಯಿಂದ ನಗರದ ಮುಳಗುಂದ ನಾಕಾದಲ್ಲಿರುವ ಶಾಹಿ ಈದ್ಗಾ ಮೈದಾನದಿಂದ ಬೃಹತ್ ರ್‍ಯಾಲಿ ನಡೆಸಿ, ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿ ಕೆಲಕಾಲ ಕಚೇರಿ ಮುಂದೆ ಪ್ರತಿಭಟನೆ ನಡೆಸಿ, ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮೌಲಾನಾ ಅಬ್ದುಲಸಮ್ಮದ ಜಕಾತಿ ಮಾತನಾಡಿ, ಇಡೀ ದೇಶದಲ್ಲಿ ಕೋಟ್ಯಾಂತರ ಮುಸ್ಲಿಂ ಸಮುದಾಯದ ಜನರು ಬೀದಿಗಿಳಿದು ವಿವಾದಾತ್ಮಕ ವಕ್ಫ್ ತಿದ್ದುಪಡಿ ಕಾಯ್ದೆ ಹಿಂಪಡೆಯಬೇಕೆಂದು ಕೇಂದ್ರ ಸರ್ಕಾರದ ವಿರುದ್ಧ ಹೋರಾಟಗಳನ್ನು ನಡೆಸಲಾಗುತ್ತಿದೆ.

ಆದರೆ ಕೇಂದ್ರ ಸರ್ಕಾರ ಮಾತ್ರ ನಾವು ಮಾಡಿದ್ದೇ ಸರಿ ಎಂದು ಬೆನ್ನು ತಟ್ಟಿಕೊಳ್ಳುತ್ತಿದೆ. ಇಂತಹ ಸರ್ವಾಧಿಕಾರಿ ಧೋರಣೆಯನ್ನು ನಾವು



ಖಂಡಿಸುತ್ತೇವೆ. ಕೇಂದ್ರ ಸರ್ಕಾರ ಸಂಪೂರ್ಣವಾಗಿ ವಕ್ಫ್ ತಿದ್ದುಪಡಿ ಕಾಯ್ದೆಯನ್ನು ಹಿಂದಕ್ಕೆ ಪಡೆಯುವವರೆಗೂ ನಾವು ನಮ್ಮ ಹೋರಾಟಗಳನ್ನು ನಿಲ್ಲಿಸುವುದಿಲ್ಲ ಎಂದರು.

ಮೌಲಾನಾ ಶಬ್ಬೀರಅಹ್ಮದ ಬೋದ್ಲೇಖಾನ ಮಾತನಾಡಿ, ನಮ್ಮ ಧಾರ್ಮಿಕ ಸ್ವಾತಂತ್ರವನ್ನು ಕಸಿದುಕೊಳ್ಳುವ ಹುನ್ನಾರ ಕೇಂದ್ರ ಸರ್ಕಾರದ್ದಾಗಿದೆ. ನಮ್ಮ ದೇಶದ ಸಂವಿಧಾನವು ನೀಡಿರುವ ಹಕ್ಕಿಗೆ ವಿರುದ್ಧವಾಗಿ ಕೇಂದ್ರ ಸರ್ಕಾರ ವಕ್ಫ್ ತಿದ್ದುಪಡಿ ಕಾಯ್ದೆಯನ್ನು ಜಾರಿಗೆ ತಂದಿದೆ. ನಮ್ಮ ಕೊನೆಯುಸಿರು ಇರುವವರೆಗೊ ನಾವು ವಕ್ಫ್ ತಿದ್ದುಪಡಿ ಕಾಯ್ದೆ ಜಾರಿ ಮಾಡಲು ಬಿಡುವುದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮೌಲಾನಾ ಶಮಶುದ್ದಿನ ಅಣ್ಣಿಗೇರಿ, ಎಂ.ಸಿ. ಶೇಖ, ಬರಕತಅಲಿ ಮುಲ್ಲಾ, ಜೂನಸಾಬ ನಮಾಜಿ, ಮೆಹಬೂಬಸಾಬ (ಚಿಮ್ಮಿ) ನದಾಫ್, ಮುನ್ನಾ ರೇಶ್ಮಿ, ಅಂಜುಮನ್ ಸಂಸ್ಥೆ ಉಪಾಧ್ಯಕ್ಷ ಬಾಬಾಜಾನ ಬಳಗಾನೂರ, ಕಾರ್ಯದರ್ಶಿ ಇಮ್ತಿಯಾಜ ಆರ್.ಮಾನ್ವಿ, ಸದಸ್ಯರಾದ ಇಲಿಯಾಸ ಖೈರಾತಿ, ರಫೀಕ ಜಮಾಲಖಾನವರ, ಮುನ್ನಾ ಶೇಖ, ಮಹ್ಮದಹನೀಫ ಶಾಲಗಾರ, ಅಶ್ಫಾಕಅಲಿ ಹೊಸಳ್ಳಿ, ಅನ್ವರ ಶಿರಹಟ್ಟಿ, ಸೈಯದ ಖಾಲೀದ ಕೊಪ್ಪಳ, ಎಂ.ಎಂ. ಮಾಳೆಕೊಪ್ಪ, ಜೂನೇದ ಉಮಚಗಿ, ಉಮರಫಾರುಖ ಹುಬ್ಬಳ್ಳಿ, ಎಂ.ಬಿ. ನದಾಫ್ ವಕೀಲರು, ಸಮೀರ ಜಮಾದಾರ ಮುಂತಾದವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

> ಅಂಜುಮನ್ ಸಂಸ್ಥೆ ಅಧ್ಯಕ್ಷ ಮಹ್ಮದಯುಸುಫ ನಮಾಜಿ ಮಾತನಾಡಿ, ರಾಜ್ಯದಲ್ಲಿ ಎಲ್ಲರೂ ಒಂದಾಗಿ ತಮ್ಮ ಜೀವನವನ್ನು ನಡೆಸುತ್ತ ಬಂದಿದ್ದಾರೆ. ವಿಜಯಪುರ ನಗರದ ಶಾಸಕ ಬಸನಗೌಡ ಪಾಟೀಲ ಯತ್ನಾಳ ತಮ್ಮ ರಾಜಕೀಯ ಲಾಭಕ್ಕಾಗಿ ಪದೇ–ಪದೇ ಒಂದು ಸಮುದಾಯವನ್ನು ಟೀಕಿಸುವುದು, ಬೈಯುವುದು, ನಿಂದಿಸುವುದನ್ನು ಮಾಡುತ್ತ ರಾಜ್ಯದಲ್ಲಿ ಕೋಮು ಘರ್ಷಣೆಗೆ ಕುಮ್ಮಕು ನೀಡುತ್ತ ಬಂದಿದ್ದಾರೆ. ಕೂಡಲೇ ಇವರ ವಿರುದ್ಧ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

# ಕಾಂಗ್ರೆಸ್ ನಾಯಕರ ವಿರುದ್ಧ ಬಿಜೆಪಿ ಪ್ರತಿಭಟನೆ



■ವಿಜಯಸಾಕ್ಷಿ ಸುದ್ದಿ, ಗದಗ

ನ್ಯಾಷನಲ್ ಹೆರಾಲ್ಡ್ ಪತ್ರಿಕೆ ಹಗರಣದಲ್ಲಿ ಜಾರಿ ನಿರ್ದೇಶನಲಯ ರಾಜ್ಯ ಸಭಾ ಸದಸ್ಯರಾದ ಸೋನಿಯಾ ಗಾಂಧಿ ಹಾಗೂ ಸಂಸತ್ತಿನ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ವಿರುದ್ಧ ಆರೋಪ ಪಟ್ಟಿ ಸಲ್ಲಿಸಿದ್ದು, ದೇಶ ಲೂಟಿ ಮಾಡಿದ ಕಾಂಗ್ರೆಸ್ ನಾಯಕರ ವಿರುದ್ಧ ಗದಗ ಜಿಲ್ಲಾ ಯುವ ಮೋರ್ಚಾ ವತಿಯಿಂದ ಗದಗ ಜಿಲ್ಲಾಧಿಕಾರಿಗಳ ಕಚೇರಿಯೆದುರು ಪ್ರತಿಭಟನೆ ಮಾಡಿ ರಸ್ತೆ ತಡೆ ನಡೆಸಿದರು.

ನೈತಿಕ ಹೊಣೆ ಹೊತ್ತು ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಪರಿಷತ್ ಸದ್ಯಸರಾದ ಕೆ.ಎಸ್. ನವೀನ, ಪಕ್ಷದ ಹಿರಿಯರಾದ ಎಂ.ಎಸ್. ಕರಿಗೌಡ್ರ, ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ, ಬಿಜೆಪಿ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಆರ್.ಕೆ. ಚವ್ಹಾಣ, ಫಕ್ಕಿರೇಶ ರಟ್ಟಿಹಳ್ಳಿ, ಯುವ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಕ್ತಿ ಕಟ್ಟಿ, ಕಿರಣ್ ಕಲಾಲ್, ರೋಹನ್ ಕೂಡನಹಳ್ಳಿ, ಮಲ್ಲಿಕಾರ್ಜುನ ಸಂತೋಜಿ, ರಾಜೇಶ ಅರಕಲ್, ಪ್ರಕಾಶ ಕೋತಂಬ್ರಿ, ಉಮೇಶ್ ಚನ್ನು ಪಾಟೀಲ್, ಹುಲ್ಲಪ್ಪ ಕೆಂಗಾರ್, ವಿನಾಯಕ್ ಹೊರಕೇರಿ, ಬಸವರಾಜ್ ನರೇಗಲ್, ಅರವಿಂದ್ ಅಣ್ಣಿಗೇರಿ, ವೀರಪ್ಪ ಹೂಗಾರ್, ಕಾಳು ತೋಟದ್, ಶಶಿಧರಗೌಡ ಕಳ್ಳಿ, ನವೀನ್ ಕೋಟೆಕಲ್, ಶಿವು ಗೋಟೂರ್, ಕಾರ್ತಿಕ್ ಶಿಗ್ಲಿಮಠ್, ಕೃಷ್ಣ ಚಿಂತಾ, ಆನಂದ್ ಕಟಗೇರಿ, ಪಕ್ಷದ ಪದಾಧಿಕಾರಿಗಳು, ಹಿರಿಯರು, ಚುನಾಯಿತ ಪ್ರತಿನಿಧಿಗಳು, ಯುವ ಮೋರ್ಚಾ ಕಾರ್ಯಕರ್ತರು, ಯುವಕರು ಉಪಸ್ಥಿತರಿದ್ದರು.

## ಸಾಕ್ಷಿ ಸುಭಾಷಿತ

ಪ್ರತಿಯೊಂದು ನೋವು ಒಂದು ಪಾಠವನ್ನು ಕಲಿಸುತ್ತದೆ ಪ್ರತಿಯೊಂದು ಪಾಠ ವ್ಯಕ್ತಿಯನ್ನು ಬದಲಿಸುತ್ತದೆ.

– ಅಬ್ದುಲ್ ಕಲಾಂ

## ಸಂಪಾದಕೀಯ

### ರೋಹಿತ ವೇಮುಲಾ ಕಾಯಿದೆ ಮತ್ತು ಕರ್ನಾಟಕ ಸರಕಾರ

ರಾಜ್ಯದಲ್ಲಿ ಜಾತಿ ಜನಗಣತಿ ವಿಷಯ ಬಹುದೊಡ್ಡ ವಿವಾದವನ್ನೆ ಸೃಷ್ಟಿಸಿರುವ ಈ ಸಂದರ್ಭದಲ್ಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದಲ್ಲಿ ರೋಹಿತ ವೇಮುಲಾ ಕಾಯ್ದೆ ಜಾರಿಗೊಳಿಸಿವುದಾಗಿ ನೀಡಿರುವ ಹೇಳಿಕೆ ಮತ್ತೊಂದು ವಿವಾದಕ್ಕೆ ಕಾರಣವಾಗಿದೆ.

ರಾಹುಲ್ ಗಾಂಧಿ ಬರೆದ ಪತ್ರಕ್ಕೆ ಪ್ರತಿಕ್ರಿಯೆ ನೀಡಿದ ಸಿದ್ದರಾಮಯ್ಯ, ರೋಹಿತ ವೇಮುಲಾ ಕಾಯ್ದೆ ಜಾರಿಗೆ ಇಂಗಿತ ವ್ಯಕ್ತಪಡಿಸಿದ್ದಾರೆ. ರೋಹಿತ ವೇಮುಲಾ ಕಾಯ್ದೆ ಉದ್ದೇಶ, ಉನ್ನತ ಶಿಕ್ಷಣದಲ್ಲಿ ಜಾತಿ ವ್ಯವಸ್ಥೆ ನಿರ್ಮೂಲನೆ ಮಾಡುವುದಾಗಿದೆ. ರೋಹಿತ್ ವೇಮುಲಾ ಕಾಯ್ದೆಯು ಭಾರತದಲ್ಲಿ ದಲಿತ ವಿದ್ಯಾರ್ಥಿಗಳ ಹಕ್ಕುಗಳನ್ನು ರಕ್ಷಿಸಲು ಮತ್ತು ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ತಾರತಮ್ಯವನ್ನು ತಡೆಯಲು ಪ್ರಸ್ತಾಪಿಸಲಾದ ಕಾನೂನು. 2016 ರಲ್ಲಿ ಹೈದರಾಬಾದ್ ಕೇಂದ್ರೀಯ ವಿಶ್ವವಿದ್ಯಾಲಯದ ಸಂಶೋಧನಾ ವಿದ್ಯಾರ್ಥಿ ರೋಹಿತ್ ವೇಮುಲಾ ಅವರ ಆತ್ಮಹತ್ಯೆಯ ನಂತರ ಈ ಕಾಯ್ದೆಯ ಬೇಡಿಕೆ ಹೆಚ್ಚಾಯಿತು.

ಈ ಕಾಯ್ದೆಯು ಉನ್ನತ ಶಿಕ್ಷಣದಲ್ಲಿ ದಲಿತ ವಿದ್ಯಾರ್ಥಿಗಳು ಎದುರಿಸುತ್ತಿರುವ ತಾರತಮ್ಯ ಮತ್ತು ಅನ್ಯಾಯಗಳಿಗೆ ಪರಿಹಾರ ನೀಡುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದು ಅವರು ವಾದಿಸುತ್ತಾರೆ. ಆದಾಗ್ಯೂ, ಈ ಕಾಯ್ದೆಯ ಕುರಿತು ವಿಭಿನ್ನ ಅಭಿಪ್ರಾಯಗಳಿವೆ. ಕೆಲವರು ಇದು ಶಿಕ್ಷಣ ಸಂಸ್ಥೆಗಳ ಸ್ವಾಯತ್ತತೆಗೆ ಧಕ್ಕೆ ತರುತ್ತದೆ ಮತ್ತು ಅನಗತ್ಯ ಹಸ್ತಕ್ಷೇಪಕ್ಕೆ ಕಾರಣವಾಗುತ್ತದೆ ಎಂದು ವಾದಿಸುತ್ತಾರೆ. ಇನ್ನೂ ಕೆಲವರು ಈಗಾಗಲೇ ಅಸ್ತಿತ್ವದಲ್ಲಿರುವ ಕಾನೂನುಗಳು ಮತ್ತು ನಿಯಮಗಳು ತಾರತಮ್ಯವನ್ನು ತಡೆಯಲು ಸಾಕಾಗುತ್ತವೆ ಎಂದು ಅಭಿಪ್ರಾಯಪಡುತ್ತಾರೆ. ಪ್ರಸ್ತುತ, ರೋಹಿತ್ ವೇಮುಲಾ ಕಾಯ್ದೆಯು ಇನ್ನೂ ಕಾನೂನಾಗಿ ಜಾರಿಗೆ ಬಂದಿಲ್ಲ. ಆದರೆ, ಈ ವಿಷಯದ ಕುರಿತಾದ ಚರ್ಚೆ ಮತ್ತು ಒತ್ತಡ ಮುಂದುವರೆದಿದೆ. ಈ ಕಾಯ್ದೆಯು ಅನುಷ್ಠಾನಗೊಂಡರೆ, ಭಾರತದ ಉನ್ನತ ಶಿಕ್ಷಣ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆಗಳನ್ನು ತರುವ ಸಾಧ್ಯತೆ ಇದೆ. ದಲಿತ ವಿದ್ಯಾರ್ಥಿಗಳಿಗೆ ನ್ಯಾಯ ಮತ್ತು ಸಮಾನ ಅವಕಾಶಗಳನ್ನು ಒದಗಿಸುವಲ್ಲಿ ಇದು ಒಂದು ಪ್ರಮುಖ ಹೆಜ್ಜೆಯಾಗಬಹುದು.

### ಅಕ್ಕನಿಂದ ತಮ್ಮನಿಗೆ ಹೀಗೊಂದು ಪತ್ರ

# ಸಂಸಾರದ ಸರಿಗಮ ತಾಳ ತಪ್ಪದಿರಲಿ

ನನ್ನ ಪ್ರೀತಿಯ ಪ್ರಿಯತಮ...

ನನ್ನ ಈ ಒಕ್ಕಣೆಯನ್ನು ನೋಡಿ ಆಶ್ಚರ್ಯವಾಯಿತು ಅಲ್ಲವೇ! ಮನದಲ್ಲಿ ನೂರೆಂಟು ಗೊಂದಲಗಳು, ತಲೆಯಲ್ಲಿ ಇಲ್ಲದ ಕೋಲಾಹಲ, ಎದೆ ಬಡಿತ ತಪ್ಪಿದ ಹಾಗೆ ಅನುಭವ ಆಗುತ್ತಿದೆ ಅಲ್ಲವೇ?

ಎಂದೂ ಇಲ್ಲದ ಹೊಸ ರೀತಿಯ ಒಂದು ಒಕ್ಕಣೆ ನಿನ್ನ ಮನಸ್ಸಿನಲ್ಲಿ ಮೊದಮೊದಲು ಗಾಬರಿ, ಭಯ ದಿಗಿಲುಗಳನ್ನು ಮೂಡಿಸಿದರೆ ನಂತರದಲ್ಲಿ ನನ್ನ ಕುರಿತು ರೇ–ಜಿಗೆ, ಅಸಹ್ಯ ಉಂಟಾಗಬಹುದು. ಅಯ್ಯೋ, ನಾನು ಇವರನ್ನು ದೇವರಂತೆ ಭಾವಿಸುತ್ತಿದ್ದೆ. ನನಗೆ ಬುದ್ಧಿ ಹೇಳುವ ನನ್ನ ಬದುಕನ್ನು ಸರಿದಾರಿಗೆ ತರುವ ದೇವತೆಯ ಸ್ಥಾನ ನೀಡಿ ಮನದಲ್ಲಿ ಆರಾಧಿಸುತ್ತಿದ್ದೆ, ಈಕೆ ಇಂತಹ ಹೆಣ್ಣು ಮಗಳು ಎಂದು ಭಾವಿಸಿರಲಿಲ್ಲ ಎಂಬೆಲ್ಲಾ ಯೋಚನೆಗಳು ಮನವನ್ನು ಮುತ್ತಿ ದಾಳಿ ಮಾಡುತ್ತಿವೆ ಅಲ್ಲವೇ?

ಅವೆಲ್ಲವನ್ನು ಪಕ್ಕಕ್ಕಿಟ್ಟು ಒಂದು ಕ್ಷಣ ಪತ್ರವನ್ನು ಮುಂದೆ ಓದು. ನಾವಿಬ್ಬರೂ ಒಂದೇ ಶಾಲೆಯ ಒಂದೇ ತರಗತಿಯಲ್ಲಿ ಓದದೆ ಇದ್ದರೂ, ಕೆಲ ತಿಂಗಳುಗಳ ವ್ಯತ್ಯಾಸವಿದ್ದರೂ ಒಂದೇ ವಯಸ್ಸಿನವರಂತೂ ಹೌದು. ಸ್ನೇಹಿತರಲ್ಲಿ ಬುದ್ಧಿವಾದ ರುಚಿಸುವುದಿಲ್ಲ! ನೀನೇನು ನನಗೆ ಹೇಳುವುದು ಎಂಬ ಭಾವ ಒಂದು ರೀತಿಯ ಅಸಹನೆಯ ರೂಪದಲ್ಲಿ ಹೊರಬರುತ್ತದೆ. ಸಿಟ್ಟಿನ ಸಮಯದಲ್ಲಿ 'ದೊಡ್ಡದಾಗಿ ಬಂದ್ಲು ಹೇಳಿ ಬಿಡೋಕೆ' ಎಂಬ ಮಾತುಗಳು ಬಾಯಿಂದ ಬರದೇ ಇದ್ದರೂ ಮನದ ಮೂಲೆಯಲ್ಲಿ ಆ ರೀತಿಯ ಅಗೋಚರ ಭಾವ ತೋಚಬಹುದು.

ಆದ್ದರಿಂದ ನಾನೇ ಮುಂದಾಗಿ ನಿನಗಿಂತ ಕೆಲ ದಿನಗಳು ದೊಡ್ಡವಳಾಗಿರುವ ಕಾರಣ ನನ್ನನ್ನು ನಾನೇ ಅಕ್ಕ ಎಂದು ಭಾವಿಸಿಕೊಂಡು ನನ್ನ ತಮ್ಮನೆಂದು ನಿನ್ನನ್ನು ಭಾವಿಸಿ ಕಿವಿ ಹಿಂಡಿ ಮಾತನಾಡುವ ಸ್ವಾತಂತ್ರ್ಯವನ್ನು ನನಗೆ ನಾನೇ ಕೊಟ್ಟುಕೊಂಡಿದ್ದೇನೆ.



ಕೇವಲ ಒಂದು ಪದ ಈ ರೀತಿಯ ವ್ಯತ್ಯಾಸವನ್ನು ಸೃಷ್ಟಿಸಬಲ್ಲುದಾದರೆ ನಮ್ಮ ಜೀವನದಲ್ಲಿ ನಡೆಯುವ ಯಾವುದೋ ಒಂದು ಕ್ಷಣಿಕ ಘಟನೆ ನಮ್ಮ ಬದುಕಿನ ಮೇಲೆ ಬೀರುವ ಪ್ರಭಾವ ಇನ್ನೆಷ್ಟು ಎಂಬುದನ್ನು ಈಗಲಾದರೂ ಯೋಚಿಸು. ಕೇವಲ ನಿನ್ನ ದಿಕ್ಕಿನಲ್ಲಿ ಮಾತ್ರ ಯೋಚಿಸಿದರೆ ಸಾಲದು. ನಿನ್ನ ಎದುರಿಗೆ ಇರುವವರ, ನೀನು ಆಪಾದಿಸುವವರ ಶೂಸಿನಲ್ಲಿ ಕಾಲಿಟ್ಟು ಯೋಚಿಸು. ವೈಜ್ಞಾನಿಕ ಪರಿಭಾಷೆಯಲ್ಲಿ 360 ಡಿಗ್ರಿ ಆಂಗಲ್ ಎಂದು ಕರೆಯುವ ಈ ಯೋಚನಾ ಕ್ರಮ ಎಲ್ಲರಿಗೂ ಸಿದ್ಧಿಸುವುದಿಲ್ಲ ನಿಜ. ಆದರೆ ಖಂಡಿತವಾಗಿಯೂ ದೈನಂದಿನ ಬದುಕಿನಲ್ಲಿ ಈ ರೀತಿಯ ಯೋಚನಾ ಕ್ರಮವನ್ನು ನೀನು ರೂಢಿಸಿಕೊಂಡಾಗ ಬೇರೆಯವರನ್ನು ಜಡ್ಜ್ ಮಾಡದೆ ಇರಲು ಸಾಧ್ಯವಾಗುತ್ತದೆ.

ನಿನಗೆ ಬೆಚ್ಚನೆ ಇರಲು ಮನೆ ಇದೆ, ವೆಚ್ಚಕ್ಕೆ ಹೊನ್ನಿದೆ, ಹಣವಿದೆ. ಇಲ್ಲಿಯವರೆಗೂ ನಿನ್ನ ಇಚ್ಛೆಯಂತೆ ನಿನಗಾಗಿ ಬಾಯಿ ಮುಚ್ಚಿಕೊಂಡು ತನ್ನೆಲ್ಲ ನೋವು ಸಂಕಟಗಳನ್ನು ಬಚ್ಚಿಟ್ಟು ನಿನಗಾಗಿ, ನಿನ್ನ ಆರೋಗ್ಯಕ್ಕಾಗಿ ಹೆದರಿ ನಡೆದ ಸತಿ ಇದ್ದಾಳೆ, ಚಿಕ್ಕ ಮಕ್ಕಳಿದ್ದಾರೆ.... ಸ್ವರ್ಗಕ್ಕೆ ಕಿಚ್ಚು ಹಚ್ಚೆಂದ ಸರ್ವಜ್ಞ ಎಂದೆನ್ನಲು ಏನೂ ಅಡ್ಡಿಯಿರಲಿಲ್ಲ ಅಲ್ಲವೇ?

ನಿಜ ಹೇಳಬೇಕೆಂದರೆ ಒಂದೇ ತಾಯಿಯ ಮಕ್ಕಳಲ್ಲಿಯೂ ಸಾಕಷ್ಟು ವೈರುಧ್ಯಗಳಿರುತ್ತವೆ. ಅಂತಹದ್ದರಲ್ಲಿ ವಿಭಿನ್ನ ಪರಿಸರದಲ್ಲಿ, ವಿಭಿನ್ನ ಹಿನ್ನೆಲೆಯಲ್ಲಿ ಹುಟ್ಟಿದ, ಬಾಲ್ಯವನ್ನು ಕಳೆದ, ಬೆಳೆದ ನಿಮ್ಮಿಬ್ಬರ ನಡುವಿನ ಆಕರ್ಷಣೆ ಪ್ರೀತಿಯಾಗಿ, ಪ್ರೀತಿ ಒಬ್ಬರನ್ನೊಬ್ಬರು ಬಾಳ ಸಂಗಾತಿಯಾಗಿ ಪಡೆಯಲೇಬೇಕು ಎಂಬ ಹಂಬಲವಾಗಿ ಆ ಹಂಬಲ ಹಠವಾಗಿ ಒಬ್ಬರನ್ನೊಬ್ಬರು ಪಡೆದುಕೊಂಡಾಗ ಅದು ತನ್ನ ಮೊದಲಿನ ಎಲ್ಲಾ ಆಕರ್ಷಣೆಗಳನ್ನು ಕಳೆದುಕೊಳ್ಳಲು ಕಾರಣ ಏನು ಎಂದು ಯೋಚಿಸಿದ್ದೀಯ?

ನಿನ್ನ ಭಾವನೆಗಳನ್ನು, ಯೋಚನೆಗಳನ್ನು, ವಿಚಾರಗಳನ್ನು ಆಕೆ ಒಪ್ಪಿಕೊಳ್ಳಲೇಬೇಕೆಂಬ ನಿನ್ನ ಹಠದಲ್ಲಿ ಶತಾಯಗತಾಯ ನಿನ್ನನ್ನು ಸಮಾಧಾನವಾಗಿರಿಸುವ ನಿಟ್ಟಿನಲ್ಲಿ ಆಕೆ ತನ್ನನ್ನು ತಾನೇ ಕಳೆದುಕೊಂಡಿದ್ದಾಳೆ. ಹಂಗಿಸುತ್ತಿದ್ದೇನೆ ಎಂದು ಭಾವಿಸಬೇಡ ತಮ್ಮಾ... ಈ ಭೂಮಿಗೆ ಬರುವಾಗ ನಾವು ಒಬ್ಬರೇ ಬಂದಿರುತ್ತೇವೆ, ಹೋಗುವಾಗಲೂ ಕೂಡ ಒಬ್ಬರೇ. ನಡುವೆ ಕಳೆಯುವ ಹಲ ಕೆಲ ವರುಷಗಳು ಋಣಾನುಬಂಧದ ರೂಪದಲ್ಲಿ, ದಾಂಪತ್ಯದ ರೂಪದಲ್ಲಿ ನೀವಿಬ್ಬರು ಸತಿ–ಪತಿಯಾಗಿದ್ದೀರಿ. ಇಲ್ಲಿ ನೀವಿಬ್ಬರೂ ಪ್ರತಿಸ್ಪರ್ಧಿಗಳಲ್ಲ. ಅಂದಮೇಲೆ ಸೋಲು–ಗೆಲುವಿನ ಪ್ರಶ್ನೆಯೇ ಇಲ್ಲ.

ನೀವಿಬ್ಬರು ಒಬ್ಬರಿಗೊಬ್ಬರು ಪೂರಕವಾಗಿ ಬದುಕಿನ ಈ ಆಟದಲ್ಲಿ ಒಂದು ತಂಡವಾಗಿ ಆಡಬೇಕು. ತಪ್ಪುಮಾಡಿಬಿಟ್ಟೆ ನೀನು! ನಿನ್ನ ಬದುಕಿನ ಅತ್ಯಮೂಲ್ಯ ಸಮಯವನ್ನು ಪತ್ನಿ, ಮಕ್ಕಳೊಂದಿಗೆ ಕಳೆಯುವ ಹಲವಾರು ಸುಖದ ನೆನಪುಗಳನ್ನು ಹುಟ್ಟು ಹಾಕುವ ಗಳಿಗೆಗಳನ್ನು ನಿನ್ನ ಕೈಯಾರೆ ನೀನೇ ಕಳೆದುಕೊಂಡಿರುವೆ. ಇದರಲ್ಲಿ ನಿನ್ನ ಪತ್ನಿಯ ಪಾಲೂ ಇದೆ ಎಂದರೆ ನಿಮ್ಮಿಬ್ಬರಿಗೂ ಬೇಸರವಾಗಬಹುದು, ಆದರೆ ಹೇಳದೆ ವಿಧಿ ಇಲ್ಲ.

ನಿನ್ನ ಕಣ್ಣಿಗೆ ಹೆಂಡತಿ, ಮಕ್ಕಳು ಅವರು ಮಾಡುವ ಪ್ರತಿಯೊಂದು ಕೆಲಸಗಳು, ಅವರ ಮಾತುಕತೆ, ಆಹಾರ–ವಿಹಾರ ಪದ್ಧತಿಗಳು ಎಲ್ಲವೂ ತಪ್ಪು ಎಂದು ಕಂಡರೆ ಅವರಾದರೂ ಏನು ಮಾಡಿಯಾರು? ತಪ್ಪನ್ನು ತಪ್ಪೆಂದು ಗುರುತಿಸಲು ಕೇವಲ ನೀನು ಹೇಳಿದರೆ ಮಾತ್ರ ಸಾಲದು ಅಥವಾ ಅದನ್ನು ಯಾರು ಬೇಕಾದರೂ ಹೇಳಬಹುದು. ಆದರೆ ಎಂದಾದರೂ ಆ ತಪ್ಪನ್ನು ನೀನು ಕೂಡ ಸೇರಿದಂತೆ ಎಲ್ಲರನ್ನೂ ಒಳಗೊಂಡು ಸರಿಪಡಿಸುವ ಪ್ರಯತ್ನವನ್ನು ಎಂದಾದರೂ ನೀನು ಮಾಡಿರುವೆಯಾ ಯೋಚಿಸು.

ಮಕ್ಕಳಿಗೆ ಇಂಥದ್ದೇ ಅಡುಗೆ ಬೇಕೆಂದಿಲ್ಲ, ಆದರೆ ಕುಟುಂಬದ ಎಲ್ಲರೂ ಒಟ್ಟಾಗಿ ಕುಳಿತು, ನಗುನಗುತ್ತಾ ಮಾತನಾಡುತ್ತಾ ಉಂಡು, ತಿಂ–ದು, ಆಡಿ ನಲಿದರೆ ಬಡತನದಲ್ಲೂ ನೆಮ್ಮದಿ, ಸಂತೃಪ್ತಿ ತಾಂಡವವಾಡುತ್ತದೆ ಎಂದು ನೀವೇಕೇ ಅರಿಯಲಿಲ್ಲ? ನಿಮ್ಮದೇ ಮನೆಯಲ್ಲಿ ಮನಗಳ ನಡುವೆ ಗೋಡೆಯನ್ನು ಕಟ್ಟಿಕೊಂಡು ಬದುಕಿನ ಸುಂದರ ಕ್ಷಣಗಳನ್ನು ನಿಮ್ಮ ಕೈಯಾರೆ ಹಾಳು ಮಾಡಿಕೊಂಡಿರಲ್ಲವೇ?

ನಾವು ಶೂನ್ಯದಿಂದ ಮುಂದೆ ಬಂದಿದ್ದೇವೆ ಮತ್ತೆ ಶೂನ್ಯಕ್ಕೆ ಹೋದರೂ ಕೂಡ ಖಂಡಿತವಾಗಿಯೂ ಮುಂದೆ ಬರುವ ಸಾಧ್ಯತೆಗಳಿವೆ. ಕಡಿವಾಣವನ್ನು ಹಾಕುವುದೇ ಆದರೆ ನಿನ್ನ ಅತಿಯಾದ ಆಲೋಚನೆಗಳಿಗೆ, ಮಾನಸಿಕ ತಳಮಳಗಳಿಗೆ ಹಾಕು. ಪೂರ್ಣ ವಿರಾಮ ಇಡುವುದಾದರೆ ನಿನ್ನ ವಿನಾಕಾರಣದ ಶಂಕೆ, ಅನುಮಾನಗಳಿಗೆ ಇಡು.

ನಿಮ್ಮಿಬ್ಬರ ನೆಮ್ಮದಿಯಲ್ಲಿ ನಿಮ್ಮ ಕುಟುಂಬದ ಒಳಿತಿದೆ. ಮತ್ತೆ ಎಲ್ಲವನ್ನು ಮೊದಲಿನಿಂದ ಆರಂಭಿಸಿದಾಗ ನೂರೆಂಟು ಕಿರಿಕಿರಿಗಳು, ಅವಮಾನಗಳು, ಮೇಲರಿಮೆ ಕೀಳರಿಮೆ ಅಹಮಿಕೆಗಳು ನಿಮ್ಮಿಬ್ಬರ ನಡುವೆ ತಡೆಗೋಡೆಯಾಗುವುದು ಬೇಡ. ಇಬ್ಬರಲ್ಲಿ ಒಬ್ಬರ ಬದುಕು ಸಾವಿನಲ್ಲಿ ಅಂತ್ಯವಾಗುವವರೆಗೆ ಜೊತೆಯಾಗಿರುವ ಈ ದಾಂಪತ್ಯವೆಂಬ ಬಂಧನದಲ್ಲಿ ನೀವಿಬ್ಬರು ಸಂತಸಾರೋಗ್ಯದಿಂದ ಇರಿ ಎಂದು ಹಾರೈಸುವ,


ನಿನ್ನ ಪ್ರೀತಿಯ ಅಕ್ಕ...

**– ವೀಣಾ ಹೇಮಂತ್‌ಗೌಡ ಪಾಟೀಲ್.**
ಮುಂಡರಗಿ.

# ಒಳ ಮೀಸಲಾತಿ ಹೋರಾಟಕ್ಕೆ ಸ್ಪಂದನೆಯಿಲ್ಲ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಒಳ ಮೀಸಲಾತಿ ನೀಡುವ ಕುರಿತು ಕಳೆದ 3 ದಶಕಗಳಿಂದ ಮಾಡುತ್ತಿರುವ ಹೋರಾಟಕ್ಕೆ ಯಾವುದೇ ಪಕ್ಷಗಳು ಗಮನ ಹರಿಸುತ್ತಿಲ್ಲ. ಈಗೀರುವ ಸರಕಾರವೂ ಸೂಕ್ತ ಸ್ಪಂದನೆ ನೀಡುತ್ತಿಲ್ಲ. ಶೀಘ್ರ ಒಳಮೀಸಲಾತಿ ಜಾರಿಗೊಳಿಸಿ ಇಲ್ಲವೇ ಕುರ್ಚಿ ಖಾಲಿ ಮಾಡಿ ಎಂದು ಪ್ರಭುರಾಜ್ ಕೊಡ್ಲಿ ಒತ್ತಾಯಿಸಿದರು.




ಅವರು ಸಮೀಪದ ಶಿಗ್ಲಿ ಗ್ರಾಮದ ಅಂಬೇಡ್ಕರ್ ನಗರದಲ್ಲಿ ಮಾದಿಗ ಸಮುದಾಯದವರನ್ನು ಉದ್ದೇಶಿಸಿ ಮಾತನಾಡಿದ ಅವರು, ಒಳಗಿಸಲಾತಿ ಜಾರಿಗಾಗಿ ಹೋರಾಟಗಳನ್ನು ನಡೆಸುತ್ತಾ ಬರುತ್ತಿದ್ದರೂ ಯಾವುದೇ ಸರ್ಕಾರ ಕ್ರಮ ಕೈಗೊಳ್ಳದಿರುವುದು ನೋವಿನ ಸಂಗತಿಯಾಗಿದೆ. ಹೊಸ ನೇಮಕಾತಿ, ಮುಂಬಡ್ತಿ ಮತ್ತು ಬ್ಯಾಕ್ಲಾಗ್ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳುವುದು ಬೇಡ. ಒಳ ಮೀಸಲಾತಿ ಜಾರಿಗೊಳಿಸುವವರೆಗೂ ಯಾವುದೇ ಕಾರಣಕ್ಕೂ ನೇಮಕಾತಿ ಮಾಡಬಾರದು. ಮಾದಿಗ ಸಮುದಾಯಕ್ಕೆ ಅನ್ಯಾಯವಾಗುತ್ತಿರುವುದನ್ನು ತಪ್ಪಿಸಬೇಕು.

ಮಾದಿಗ ಸಮುದಾಯದ ಶಾಸಕರು, ಸಚಿವರು ಸಚಿವ ಸಂಪುಟದಲ್ಲಿ ಧ್ವನಿಯೆತ್ತಬೇಕು ಎಂದು ಅವರು ಆಗ್ರಹಿಸಿದರು.

ಕ್ರಾಂತಿಕಾರಿ ಹೋರಾಟಗಾರ ಮಲ್ಲೇಶ ಮಾತನಾಡಿ, ದಲಿತ ಸಂಘರ್ಷ ಸಮಿತಿ ಸಂಸ್ಥಾಪಕ, ಸಮುದಾಯದ ಹೋರಾಟಗಾರ ಪ್ರೊ. ಬಿ.ಕೃಷ್ಣಪ್ಪ ಅವರ ಸಮಾಧಿ ಸ್ಥಳದಿಂದ ಕ್ರಾಂತಿಕಾರಿ ರಥಯಾತ್ರೆ, ಬೆಂಗಳೂರಿನ ಫ್ರೀಡಂ ಪಾರ್ಕ್‌ವರೆಗೂ ಜರುಗುತ್ತಿದೆ.

ಜಾತಿ ಗಣತಿ ದಾಖಲಾತಿ ಮಾಡುವ ಸಂದರ್ಭದಲ್ಲಿ ಮಾದಿಗ, ಮಾದರ್ ಅಂತ ಸ್ಪಷ್ಟವಾಗಿ ಪೆನ್ನಿನಿಂದ ಬರೆದುಕೊಳ್ಳುವಂತೆ ಹೇಳಬೇಕು. ಹರಿಜನ ಎಂಬ ಶಬ್ದವನ್ನು ಜಾತಿ ಸಮೀಕ್ಷೆ ಮಾಡುವ ಸಂದರ್ಭದಲ್ಲಿ ಬರೆಯಿಸಕೂಡದು. ಒಳ ಮೀಸಲಾತಿ ಜಾರಿಯಾಗುವವರೆಗೂ ನಮ್ಮ ಹೋರಾಟ ನಿಲ್ಲುವುದಿಲ್ಲ ಎಂದು ನುಡಿದರು.

ಕ್ರಾಂತಿಕಾರಿ ರಥಯಾತ್ರೆ ತಾಲೂಕಿಗೆ ಆಗಮಿಸುತ್ತಿದ್ದಂತೆ ಲಕ್ಷ್ಮೇಶ್ವರ ಹಾಗೂ ಶಿಗ್ಲಿ ಗ್ರಾಮದಲ್ಲಿ ಮಾದಿಗ ಸಮಾಜದ ಮುಖಂಡರು, ಯುವಕರು ಅದ್ದೂರಿಯಾಗಿ ಸ್ವಾಗತಿಸಿದರು. ಈ ಸಂದರ್ಭದಲ್ಲಿ ಮುಖಂಡರಾದ ಎನ್.ಡಿ. ಮೇಗಲಮನಿ, ಹನುಮಂತ ಛಬ್ಬಿ, ಕರಿಯಪ್ಪ ಶಿರಹಟ್ಟಿ, ಮೈಲಾರಪ್ಪ ಡಿ.ಎಚ್, ಚಂದ್ರು ಕರಜಿಗಿ, ಮನೋಹರ್ ಕರಜಗಿ, ಶಿವಾನಂದ ಮೇಗಲಮನಿ, ಮಾರ್ತಂಡಪ್ಪ ಗಾಳಪ್ಪನವರ್, ಸೋಮಣ್ಣ ಯತ್ತಿನಹಳ್ಳಿ, ಗುಡ್ಡಪ್ಪ ಮತ್ತೂರ್, ಬಸವರಾಜ ಹೊಸಮನಿ ಸೇರಿದಂತೆ ಅಂಬೇಡ್ಕರ್ ನಗರದ ಮಹಿಳೆಯರು, ಯುವಕರು, ಸಮುದಾಯದ ಮುಖಂಡರು ಇದ್ದರು.

# ಪರೀಕ್ಷಾ ಕೇಂದ್ರಗಳ ಸುತ್ತಲೂ ಪ್ರತಿಬಂಧಕಾಜ್ಞೆ ಜಾರಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ಮಂಡಳಿಯು 2025 ರ ಎಪ್ರಿಲ್ ಮತ್ತು ಮೇ ತಿಂಗಳಲ್ಲಿ ಜರುಗುವ ದ್ವಿತೀಯ ಪಿ.ಯು.ಸಿ. ಪರೀಕ್ಷೆ–2 ಪರೀಕ್ಷೆಗಳನ್ನು ಎಪ್ರಿಲ್ 24 ರಿಂದ ಮೇ 8 ರವರೆಗೆ ಬೆಳಿಗ್ಗೆ 10.15 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ನಡೆಸಲಿದೆ.

ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡಲು ಗದಗ ಜಿಲ್ಲೆಯ 9 ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಎಪ್ರಿಲ್ 24 ರಿಂದ ಮೇ 8 ರವರೆಗೆ ಬೆಳಿಗ್ಗೆ 8 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಗೂಡುವುದು ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ಹಾಗೂ ಅನಧಿಕೃತ ವ್ಯಕ್ತಿಗಳಿಗೆ ಪರೀಕ್ಷಾ ಕೇಂದ್ರಗಳ ಪ್ರವೇಶವನ್ನು ನಿರ್ಬಂಧಿಸಿದೆ. ಈ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಝೆರಾಕ್ಸ್ ಅಂಗಡಿ, ಸೈಬರ್ ಸೆಂಟರ್ , ಬುಕ್ ಸ್ಟಾಲ್, ಫೋಟೋ ಕಾಪಿಯರ್ ಗಳನ್ನು ಬಂದ್ ಮಾಡಲು ಆದೇಶಿಸಿದೆ.

ಈ ಪ್ರದೇಶ ವ್ಯಾಪ್ತಿಯಲ್ಲಿ ಪರೀಕ್ಷೆಗಳು ನಡೆಯುವ ಸಮಯದಲ್ಲಿ ಧ್ವನಿವರ್ಧಕಗಳ ಬಳಕೆಯನ್ನು ನಿರ್ಬಂಧಿಸಿದೆ. ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಮತ್ತು ಹೊರಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು, ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಕ್ಯಾಮರಾ ಹೊಂದಿರದ ಸಾಮಾನ್ಯ ಮೊಬೈಲ್ ಇರಿಸಿಕೊಳ್ಳಲು ಅವಕಾಶವಿದ್ದು , ಉಳಿದ ಎಲ್ಲ ಪರೀಕಾ ಸಿಬ್ಬಂದಿ/ ವಿದ್ಯಾರ್ಥಿಗಳು ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು / ಉಪಯೋಗಿಸುವುದನ್ನು ನಿಷೇಧಿಸಲಾಗಿದೆ.

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು ಪ್ರತಿಬಂಧಿಸಿದ ಯಾವುದೇ ವಸ್ತುಗಳನ್ನು ಸಂಬಂಧಪಟ್ಟವರು ಪರೀಕ್ಷಾ ಕೇಂದ್ರದಲ್ಲಿ ತೆಗೆದುಕೊಂಡು ಹೋಗಲು ನಿರ್ಬಂಧಿಸಿದೆ ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಕ್ಷೇಪಣೆ ಎ.29 ಕೊನೆಯ ದಿನ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಮಿಷನ್ ಶಕ್ತಿ ಯೋಜನೆಯಡಿ ಜಿಲ್ಲಾ ಸಂಯೋಜಕರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿತ್ತು. ಸದರಿ ಹುದ್ದೆಗೆ ಒಟ್ಟು 68 ಅರ್ಜಿಗಳು ಸ್ವೀಕೃತವಾಗಿವೆ.
ಸದರಿ ಹುದ್ದೆಯ ಆಯ್ಕೆ ಕುರಿತು ದಿ:04.04.2025ರಂದು ಜಿಲ್ಲಾ ಮಿಷನ್ ಶಕ್ತಿ ಮೇಲ್ವಿಚಾರಣೆ ಹಾಗೂ ಅನುಷ್ಠಾನ ಸಮಿತಿಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಚರ್ಚಿಸಿದ ನಂತರ ಸದರಿ ಹುದ್ದೆಯ ಈ ಕೆಳಗಿನಂತೆ ತಾತ್ಕಾಲಿಕ ಅರ್ಹ ಹಾಗೂ ಅನರ್ಹ ಆಯ್ಕೆ ಪಟ್ಟಿ ಹೊರಡಿಸಿದ್ದು, ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ ಆಕ್ಷೇಪಣೆ ಸಲ್ಲಿಸುವವರು ಎಪ್ರಿಲ್ 29 ರ ಸಂಜೆ 5.30 ಗಂಟೆಯೊಳಗೆ ಉಪ ನಿರ್ದೇಶಕರ ಕಾರ್ಯಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಗದಗ ಇಲ್ಲಿ ಸಲ್ಲಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಪ್ರಕಟಣೆ ತಿಳಿಸಿದೆ.

### ವಕ್ಫ್ ತಿದ್ದುಪಡಿ ಮಸೂದೆ ಅಂಗಿಕಾರಕ್ಕೆ ವೆಲ್ಫೇರ್ ಪಾರ್ಟಿ ವಿರೋಧ

# ರಾಷ್ಟ್ರವ್ಯಾಪಿ ಅಭಿಯಾನಕ್ಕೆ ಸಿದ್ಧತೆ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಸಂಸತ್ ನಲ್ಲಿ ವಕ್ಫ್ ತಿದ್ದುಪಡಿ ಮಸೂದೆ ಅಂಗಿಕಾರವಾಗಿದ್ದು, ಈ ಕಾನೂನು ಸಂವಿಧಾನ ವಿರೋಧಿ ಹಾಗೂ ಸಂವಿಧಾನ ಕೊಟ್ಟಿರುವ ಧಾರ್ಮಿಕ ಸ್ವಾತಂತ್ರದಲ್ಲಿ ಹಸ್ತಕ್ಷೇಪವಾಗಿದೆ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ರಾಜ್ಯಾಧ್ಯಕ್ಷ ಅಡ್ವೊಕೇಟ್ ತಾಹೇರ್ ಹುಸೇನ್ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಈ ಅಸಂವಿಧಾನಿಕ ತಿದ್ದುಪಡಿಯ ವಿರುದ್ಧ ಸಮಿತಿಯಿಂದ ದೇಶವ್ಯಾಪಿ ಹೋರಾಟಕ್ಕೆ ಕರೆ ನೀಡಿದ ಅಂಗವಾಗಿ ಎಪ್ರಿಲ್ 20ರಿಂದ 27ರವರೆಗೆ ರಾಜ್ಯವ್ಯಾಪಿ ಚಳುವಳಿ ಹಮ್ಮಿಕೊಂಡಿದೆ. ಚಳುವಳಿಯ ಭಾಗವಾಗಿ ರಾಜ್ಯಾದ್ಯಂತ ಪತ್ರಿಕಾಗೋಷ್ಠಿ, ವಿಚಾರಗೋಷ್ಠಿ, ಪ್ರತಿಭಟನೆ, ಪಾದಯಾತ್ರೆ, ಸಹಿ ಸಂಗ್ರಹಣೆ, ಕರಪತ್ರ ಹಂಚಿಕೆ ಹೀಗೆ ಹಲವಾರು ಕಾರ್ಯಕ್ರಮಗಳು ಹಮ್ಮಿಕೊಳ್ಳಲಾಗುವುದು. ಯಾವುದೇ ಕಾರಣಕ್ಕೂ ಈ ಕಾಯ್ದೆಯನ್ನು ಒಪ್ಪಲಾಗದು. ಸರಕಾರ ಈ ಕಾಯ್ದೆಯನ್ನು ವಾಪಸ್ ಪಡೆಯವವರೆಗೂ ಹೋರಾಟ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ರಾಜ್ಯ ಉಪಾಧ್ಯಕ್ಷ ಇಂಜಿನಿಯರ್ ಹಬಿಬುಲ್ಲಾಹ್ ಖಾನ್ ಹಾಗೂ ಮಾಧ್ಯಮ ಸಂಚಾಲಕ ರಿಜ್ವಾನ್ ಹುಮನಾಬಾದ್ ಉಪಸ್ಥಿತರಿದ್ದರು.

### ನರೇಗಾ ಸಮುದಾಯ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿದ ಮಂಜುಳಾ ಹಕಾರಿ

# ಅಳತೆಗೆ ತಕ್ಕಂತೆ ಕೆಲಸ ಮಾಡಿ

**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಬೇಸಿಗೆಯಲ್ಲಿ ದುಡಿಯುವ ಕೈಗೆ ಕೆಲಸ ಇಲ್ಲ ಎಂಬ ಚಿಂತೆ ಬೇಡ. ನರೇಗಾ ಕಾರ್ಮಿಕರಿಗೆ ಇದ್ದೂರಲ್ಲೇ ಕೆಲಸ ನೀಡಿ ದಿನವೊಂದಕ್ಕೆ 370 ರೂಪಾಯಿ ಹಣ ಜಮಾವಣೆ ಮಾಡಲಾಗುವುದು ಎಂದು ಗಜೇಂದ್ರಗಡ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಮಂಜುಳಾ ಹಕಾರಿ ಹೇಳಿದರು.

ತಾಲೂಕಿನ ಮುಶಿಗೇರಿ ಗ್ರಾ.ಪಂ ವ್ಯಾಪ್ತಿಯ ಚಿಕ್ಕಅಳಗುಂಡಿ ಗ್ರಾಮದಲ್ಲಿ ನರೇಗಾ ಸಮುದಾಯ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿ ಪರಿಶೀಲಿಸಿದ ಬಳಿಕ ನರೇಗಾ ಕಾರ್ಮಿಕರೊಂದಿಗೆ ಸಮಾಲೋಚನೆ ನಡೆಸಿ ಅವರು ಮಾತನಾಡಿದರು.



ನರೇಗಾ ಯೋಜನೆಯಡಿ ಕೂಲಿ ಕಾರ್ಮಿಕರಿಗೆ ಬೇಸಿಗೆ ಅವಧಿಯಲ್ಲಿ ತಾಲೂಕಿನ ಗ್ರಾಮ ಪಂಚಾಯಿತಿಗಳು ಹಲವು ಕಾಮಗಾರಿಗಳಲ್ಲಿ ಕೆಲಸ ನೀಡುತ್ತವೆ. ಕೂಲಿ ಕಾರ್ಮಿಕರು ನರೇಗಾ ಯೋಜನೆಯಡಿ ಕೆಲಸ ಪಡೆದುಕೊಂಡು ತಮ್ಮ ಆರ್ಥಿಕ ಜೀವನಮಟ್ಟವನ್ನು ಸುಧಾರಿಸಿಕೊಳ್ಳಬೇಕು. ಯೋಜನೆಯಡಿ ಪಡೆಯುವ ಹಣ ತಮ್ಮ ಮಕ್ಕಳ ವಿದ್ಯಾಭ್ಯಾಸಕ್ಕೆ ಹಾಗೂ ಮಳೆ ಬಿದ್ದ ಬಳಿಕ ಕೃಷಿ ಚಟುವಟಿಕೆಗಳಿಗೆ ಬೀಜ–ಗೊಬ್ಬರ ಖರೀದಿಗೆ ಸಹಾಯಕವಾಗುತ್ತದೆ. ಮಳೆ ಬಿದ್ದು ಕೃಷಿ ಚಟುವಟಿಕೆ ಕೆಲಸ ಆರಂಭವಾಗುವವರೆಗೂ ನರೇಗಾ ಯೋಜನೆಯಡಿ ಕೆಲಸ ಕೊಡಲಾಗುವುದು. ಹೀಗಾಗಿ ಪರಸ್ಥಳಕ್ಕೆ ಯಾರೂ ವಲಸೆ ಹೋಗದೇ ಬೇಸಿಗೆ ಅವಧಿಯಲ್ಲಿ ಇದ್ದೂರಲ್ಲೇ ಕೆಲಸ ಮಾಡಿ ಎಂದು ತಿಳಿಸಿದರು. ನರೇಗಾ ಸಮುದಾಯ ಕಾಮಗಾರಿಯಡಿ ಅಳತೆಗೆ ತಕ್ಕಂತೆ ಕೆಲಸ ಮಾಡಿದರೆ ದಿನಕ್ಕೆ 370 ರೂಪಾಯಿ ಕೂಲಿ ಕಾರ್ಮಿಕರ ವೈಯಕ್ತಿಕ ಖಾತೆಗೆ ಜಮಾವಣೆಯಾಗುತ್ತದೆ. ಜೊತೆಗೆ ಕೂಲಿ ಕಾರ್ಮಿಕರ ಹಾಜರಾತಿಗೆ ದಿನವೊಂದಕ್ಕೆ ಎರಡು ಫೋಟೋಗಳನ್ನು ತಗೆಯಲಾಗುವುದು. ಎರಡು ಫೋಟೋಗಳಲ್ಲಿ ಕೂಲಿ ಕಾರ್ಮಿಕರು ಇದ್ದರೆ ಮಾತ್ರ ದಿನದ ಕೂಲಿಮೊತ್ತ ಕಾರ್ಮಿಕರ ಖಾತೆಗೆ ಜಮಾವಣೆಯಾಗುತ್ತದೆ. ಇದನ್ನು ಕೂಲಿ ಕಾರ್ಮಿಕರು ಅರ್ಥೈಸಿಕೊಂಡು ಸರಿಯಾಗಿ ಹಾಜರಾತಿ ನಿರ್ವಹಣೆಯಲ್ಲಿ ಭಾಗವಹಿಸಬೇಕೆಂದು ತಿಳಿಸಿದರು.

ಬಳಿಕ ನರೇಗಾ ಕೂಲಿ ಕಾರ್ಮಿಕರ ಸಮಸ್ಯೆಗಳನ್ನು ಆಲಿಸಿದ ಮಂಜುಳಾ ಹಕಾರಿ, ಬೇಸಿಗೆ ಅವಧಿಯಲ್ಲಿ ನರೇಗಾ ಸಮುದಾಯ ಕಾಮಗಾರಿ ನಡೆಯುವ ಸ್ಥಳದಲ್ಲಿ ಕೂಲಿ ಕಾರ್ಮಿಕರ ಸಂಖ್ಯೆಗೆ ಅನುಗುಣವಾಗಿ ನೆರಳಿನ ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ಮಾಡುವಂತೆ ಗ್ರಾ.ಪಂ ಸಿಬ್ಬಂದಿಗೆ ಸೂಚನೆ ನೀಡಿದರು.

ಈ ಸಂಭರ್ದದಲ್ಲಿ ಮುಶಿಗೇರಿ ಗ್ರಾ.ಪಂ ಸದಸ್ಯರಾದ ಮಲ್ಲಪ್ಪ ಹುಲ್ಲೂರು, ಕವಿತಾ ಸಂಗಪ್ಪ ಲಗುಬಗಿ, ಪಿಡಿಓ ಮಂಜುನಾಥ ಮೇಟಿ, ತಾ.ಪಂ ನರೇಗಾ ವಿಭಾಗದ ತಾಂತ್ರಿಕ ಸಂಯೋಜಕ ಪ್ರಕಾಶ್ ಮ್ಯಾಕಲ್, ಗ್ರಾಮ ಕಾಯಕ ಮಿತ್ರ ಪ್ರೇಮಾ ಹಿರೇಮಠ, ಬಿಎಫ್‌ಟಿ ಶಂಕರಗೌಡ ಪಾಟೀಲ್, ಕಾಯಕ ಬಂಧುಗಳು ಮತ್ತು ಗ್ರಾ.ಪಂ ಸಿಬ್ಬಂದಿ ಹಾಜರಿದ್ದರು.

# ಉಪನ್ಯಾಸ ಕಾರ್ಯಕ್ರಮ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಪ್ರತಿವಾರದಂತೆ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಎಪ್ರಿಲ್ 20ರ ಬೆಳಿಗ್ಗೆ 7.30 ಗಂಟೆಗೆ ನಡೆಯಲಿರುವ ಬಸವದಳದ 1642ನೇ ಶರಣ ಸಂಗಮದಲ್ಲಿ ಸಹಜ ಶಿವಯೋಗ ಹಾಗೂ ವೈರಾಗ್ಯನಿಧಿ ಅಕ್ಕಮಹಾದೇವಿ ಜಯಂತಿ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಬಸವದಳ ಗದಗ-ಬೆಟಗೇರಿ, ಗದಗ ತಾಲೂಕಾ ಶರಣ ಸಾಹಿತ್ಯ ಪರಿಷತ್ತು, ಕದಳಿ ಮಹಿಳಾ ವೇದಿಕೆ ಗದಗ ಇವುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಶರಣ ಎಂ.ಬಿ. ಲಿಂಗಧಾಳ ವಹಿಸುವರು. ಶರಣ ಎಸ್.ಎ. ಮುಗದ ಸಹಜ ಶಿವಯೋಗ ನಡೆಸುವರು ಹಾಗೂ ಉಪನ್ಯಾಸಕಿ, ಶರಣೆ ಸುಧಾ ಹುಚ್ಚಣ್ಣವರ ಉಪನ್ಯಾಸ ನೀಡುವರು. ಶರಣೆ ಶೋಭಾ ಹಲಗಿ ಅತಿಥಿಗಳಾಗಿ ಆಗಮಿಸುವರು.

ಕಾರಣ ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

# ಕವಿತೆಗಳ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**


ಎಪ್ರಿಲ್ 30ರಂದು ಜಗಜ್ಯೋತಿ ಬಸವೇಶ್ವರ ಜಯಂತಿ ನಿಮಿತ್ತ ಜಿಲ್ಲಾಧಿಕಾರಿಗಳ ಆದೇಶದಂತೆ ಆಸಕ್ತರು ಜಗಜ್ಯೋತಿ ಬಸವೇಶ್ವರ ಅವರ ಕುರಿತು ಕವಿತೆಗಳನ್ನು ರಚಿಸಿ ಎಪ್ರಿಲ್ 24 ರೊಳಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ರೂಂ ನಂ. 103, ಜಿಲ್ಲಾಡಳಿತ ಭವನ, ಗದಗ ಈ ಕಚೇರಿಗೆ ಕಳುಹಿಸಿಕೊಡಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕವಿತೆಗಳನ್ನು ಕಚೇರಿ ಇಮೇಲ್ ವಿಳಾಸ : dkc.gadag@gmail.com ಗೆ ಕಳುಹಿಸಬಹುದಾಗಿದೆ.

### ಶ್ರೀ ಶಿವಲಿಂಗ ಶಿವಾಚಾರ್ಯ ಸ್ವಾಮಿಗಳವರ ಷಷ್ಟ್ಯಬ್ಧಿ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು

# ಗುರಿ, ಧ್ಯೇಯ ವ್ಯಕ್ತಿತ್ವ ವಿಕಾಸಕ್ಕೆ ಅಡಿಪಾಯ

**■ವಿಜಯಸಾಕ್ಷಿ ಸುದ್ದಿ, ರಟ್ಟೀಹಳ್ಳಿ**

ಸೌಹಾರ್ದ, ಸಂಯಮ, ಸಹಬಾಳ್ವೆ ಜೀವನದ ಪರಮ ಗುರಿಯಾಗಬೇಕು. ಯೋಗ್ಯ ಸಂಸ್ಕಾರ ದೊರೆತರೆ ಬೆಲೆಯುಳ್ಳ ಬದುಕು ಸಾರ್ಥಕಗೊಳ್ಳುತ್ತದೆ. ಉತ್ತಮ ಗುರಿ ಮತ್ತು ಆದರ್ಶ ವ್ಯಕ್ತಿತ್ವ ವಿಕಾಸಕ್ಕೆ ಅಡಿಪಾಯ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.



ಮನುಷ್ಯ ಜೀವನದಲ್ಲಿ ಧರ್ಮ, ಯಶಸ್ಸು, ನೀತಿ, ದಕ್ಷತೆ ಮತ್ತು ಒಳ್ಳೆಯ ಮಾತು ಅಳವಡಿಸಿಕೊಂಡರೆ ಶ್ರೇಯಸ್ಸು ಕಟ್ಟಿಟ್ಟ ಬುತ್ತಿ. ಗುರಿಯಿಲ್ಲದ ಮತ್ತು ಗುರಿ ಸಾಧಿಸದ ಬದುಕು ನಿರರ್ಥಕ. ಒಳ್ಳೆಯ ಗುಣ, ಒಳ್ಳೆಯ ಸಂಬಂಧ ಜೀವನದ ಅಮೂಲ್ಯ ಸಂಪತ್ತು. ಪ್ರಾಣ, ಯೌವನ, ಕಾಲ ಒಮ್ಮೆ ಕಳೆದರೆ ಮತ್ತೆಂದೂ ತಿರುಗಿ ಬರಲಾರವು. ಜೀವನದ ಉನ್ನತಿಗೆ, ಉಜ್ವಲ ಭವಿಷ್ಯಕ್ಕೆ ಧರ್ಮಾಚರಣೆ ಮುಖ್ಯ. ವೀರಶೈವ ಧರ್ಮದಲ್ಲಿ ಕ್ರಿಯಾಶೀಲ ಬದುಕಿಗೆ ಬಹಳಷ್ಟು ಮಹತ್ವವಿದೆ. ಮನುಷ್ಯನಲ್ಲಿ ಅಡಗಿರುವ ಅಜ್ಞಾನ ದೂರ ಮಾಡಿ ಸಂಸ್ಕಾರ ಸಂಸ್ಕೃತಿ ಬಿತ್ತಿ ಬೆಳೆದ ಕೀರ್ತಿ ಶ್ರೀಗಳಿಗೆ ಸಲ್ಲುತ್ತದೆ ಎಂದು ರಂಭಾಪುರಿ ಶ್ರೀಗಳು ಹರುಷ ವ್ಯಕ್ತಪಡಿಸಿದರು.

ಅವರು ಶನಿವಾರ ರಟ್ಟೀಹಳ್ಳಿ ಕಬ್ಬಿಣಕಂತಿಮಠದ ಶ್ರೀ ಶಿವಲಿಂಗ ಶಿವಾಚಾರ್ಯ ಸ್ವಾಮಿಗಳವರ ಷಷ್ಟ್ಯಬ್ಧಿ ಸಮಾರಂಭದ ಅಂಗವಾಗಿ ಜರುಗಿದ ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮಾಜಿ ಶಾಸಕ ಬಿ.ಎಚ್. ಬನ್ನಿಕೋಡ ಸಮಾರಂಭವನ್ನು ಉದ್ಘಾಟಿಸಿ ಶಿವಲಿಂಗ ಶ್ರೀಗಳ ಕ್ರಿಯಾಶೀಲತೆಯ ಕುರಿತು ಮಾತನಾಡಿದರು. ಅಧ್ಯಕ್ಷತೆ ವಹಿಸಿದ ಶಾಸಕ ಯು.ಬಿ. ಬಣಕಾರ ಮಾತನಾಡಿ, ಕಬ್ಬಿಣಕಂಥಿಮಠ ಈ ಭಾಗದ ಭಕ್ತರಿಗೆ ಸಂಸ್ಕಾರ-ಸದ್ವಿಚಾರಗಳನ್ನು ಬೋಧಿಸುತ್ತ ಬಂದಿದೆ. ಶಿವಲಿಂಗ ಶ್ರೀಗಳು ಶ್ರೀ ಮಠದ ಕೀರ್ತಿ ಹೆಚ್ಚಿಸಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ 'ಶ್ರೀ ಕಬ್ಬಿಣಕಂಥಿಮಠ ಪರಂಪರೆ' ಪರಿಚಯ ಗ್ರಂಥವನ್ನು ಬಿಡುಗಡೆ ಮಾಡಲಾಯಿತು.

ಎಡೆಯೂರು ಬಾಳೆಹೊನ್ನೂರು ಖಾಸಾ ಶಾಖಾ ಮಠದ ರೇಣುಕ ಶಿವಾಚಾರ್ಯ ಸ್ವಾಮಿಗಳು, ಸಮಾರಂಭದ ನೇತೃತ್ವ ವಹಿಸಿದ್ದ ಕಬ್ಬಿಣಕಂತಿಮಠದ ಶಿವಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿದರು.

ಸಮಾರಂಭದಲ್ಲಿ ಬಿಳಕಿ ರಾಚೋಟೇಶ್ವರ ಶಿವಾಚಾರ್ಯರು, ತಾವರೆಕೆರೆ ಡಾ. ಅಭಿನವ ಸಿದ್ಧಲಿಂಗ ಶಿವಾಚಾರ್ಯರು, ದಿಂಡದಹಳ್ಳಿ ಪಶುಪತಿ ಶಿವಾಚಾರ್ಯರು, ಹಾರನಹಳ್ಳಿ ಶಿವಯೋಗಿ ಶಿವಾಚಾರ್ಯರು ಪಾಲ್ಗೊಂಡು ಶಿವಲಿಂಗ ಶ್ರೀಗಳವರಿಗೆ ಗೌರವಿಸಿ ಸತ್ಕರಿಸಿದರು. ಮುಖ್ಯ ಅತಿಥಿಗಳಾಗಿ ಟಿಎಪಿಸಿಎಮ್‌ಎಸ್ ಅಧ್ಯಕ್ಷ ಪ್ರಶಾಂತ ದ್ಯಾವಕ್ಕಳವರ, ನಿವೃತ್ತ ಐಎಫ್‌ಎಸ್ ಅಧಿಕಾರಿ ಮಂಜುನಾಥ ತಂಬಾಕದ, ಜಿ.ಪಂ ಮಾಜಿ ಸದಸ್ಯರಾದ ಪ್ರಕಾಶ ಬನ್ನಿಕೋಡ, ನಾರಾಯಣಪ್ಪ ಗೌರಕ್ಕನವರ, ಎನ್.ಎಮ್. ಈಟೇರ, ಪಿ.ಡಿ. ಬಸವನಗೌಡ್ರ ಸೇರಿದಂತೆ ಎನ್.ಜಿ. ನಾಗನಗೌಡ್ರ, ಮಹೇಶ ಗುಬ್ಬಿ, ಮಹೇಂದ್ರ ಬಡಳ್ಳಿ, ಹೇಮಣ್ಣ ಮುದಿರಡ್ಡೇರ್, ಎ.ಕೆ. ಪಾಟೀಲ, ಡಾ. ನಿಂಗಪ್ಪ ಚಳಗೇರಿ, ಶಂಭಣ್ಣ ಗೂಳಪ್ಪನವರ, ಮಾಲತೇಶಗೌಡ ಗಂಗೋಳ, ಹನುಮಂತಗೌಡ ಭರಮಣ್ಣನವರ, ಕಂಠಾಧರ ಅಂಗಡಿ, ಸಂದೀಪ ಎಸ್.ಪಾಟೀಲ, ಆರ್.ಎನ್. ಗಂಗೋಳ, ಮಹೇಶಯ್ಯ ಮಠದ, ಪ್ರಭುಲಿಂಗಸ್ವಾಮಿ ಕಬ್ಬಿಣಕಂಥಿಮಠ, ಮಲ್ಲೇಶಪ್ಪ ಹುಲ್ಮನಿ, ಪರಮೇಶಪ್ಪ ಹಲಗೇರಿ, ರುದ್ರಮುನಿಸ್ವಾಮಿ ಆರಾಧ್ಯಮಠ, ವಿರೂಪಾಕ್ಷಪ್ಪ ಹಂಪಾಳಿ ವೀರನಗೌಡ ಪ್ಯಾಟಿಗೌಡ್ರ, ಲಿಂಗಯ್ಯ ಹಿರೇಮಠ, ರಾಜು ಹರವಿಶೆಟ್ರ ಮೊದಲಾದವರು ಪಾಲ್ಗೊಂಡು ಶ್ರೀಗಳವರ ಯಶೋಗಾಥೆಯನ್ನು ಕೊಂಡಾಡಿದರು.

ಡಾ. ಎಸ್.ಪಿ. ಗೌಡರ್ ಪ್ರಾಸ್ತಾವಿಕ ನುಡಿದರು. ವಸಂತ ದ್ಯಾವಕ್ಕಳವರ ಸ್ವಾಗತಿಸಿದರು. ಸಿ.ಎಸ್. ಚಕ್ರಸಾಲಿ, ಸಿ.ಬಿ. ಅಂಗಡಿ ನಿರೂಪಿಸಿದರು.

# ಯತ್ನಾಳ್ ವಿರುದ್ಧ ಕ್ರಮಕ್ಕೆ ಮನವಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಬಿಜೆಪಿ ಮುಖಂಡ ಬಸನಗೌಡ ಪಾಟೀಲ ಯತ್ನಾಳರನ್ನು ಬಂಧಿಸುವಂತೆ ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ರಾಜ್ಯಾಧ್ಯಕ್ಷ ಮಹ್ಮದಶಫಿ ಎಸ್.ನಾಗರಕಟ್ಟಿ ಆದೇಶದ ಮೇರೆಗೆ ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ಗದಗ ಜಿಲ್ಲಾ ಯುವ ಘಟಕದ ಅಧ್ಯಕ್ಷ ಯಾಸೀನ್ ಅ.ಮುಲ್ಲಾ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಿದರು.



ಪ್ರವಾದಿಗಳು ಮತ್ತು ಅಲ್ಪಸಂಖ್ಯಾತ ಸಮುದಾಯದ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡುತ್ತಿರುವ ಬಸನಗೌಡ ಪಾಟೀಲ್ ಯತ್ನಾಳ್ ಕಳೆದ ಹಲವಾರು ತಿಂಗಳುಗಳಿಂದ ಅಲ್ಪಸಂಖ್ಯಾತ ಸಮುದಾಯದ ಮೇಲೆ ಸತತವಾಗಿ ಅವಹೇಳನಕಾರಿ ಮಾತುಗಳನ್ನಾಡುತ್ತಿದ್ದಾರೆ. ಬಸವನಗೌಡ ಪಾಟೀಲ ಯತ್ನಾಳರು ಕೋಮು ಸೌಹಾರ್ದತೆಗೆ ಹೆಸರಾದ ಕರ್ನಾಟಕ ರಾಜ್ಯದಲ್ಲಿ ಕೋಮುಗಲಭೆ ಸೃಷ್ಟಿಸಲು ಜಾತಿ-ಜಾತಿಗಳ ನಡುವೆ ಸಂಘರ್ಷವನ್ನುಂಟು ಮಾಡುವಂತಹ ಹೇಳಿಕೆಗಳನ್ನು ನೀಡುತ್ತಿರುವುದರಿಂದ ತಕ್ಷಣ ಇವರನ್ನು ಕೇಂದ್ರ ಸರ್ಕಾರ ಬಂಧಿಸಬೇಕೆಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷ ಅಫ್ಜಲ್ ಮನಿಯಾರ, ಸೋಹೆಲ್ ಹಣಗಿ, ಯಾಸೀನ್ ಖವಾಸ, ರಶೀದ ಖವಾಸ, ಶಬ್ಬೀರ ಕುನ್ನಿಬಾವಿ ಮುಂತಾದವರು ಉಪಸ್ಥಿತರಿದ್ದರು.

### ಜನಿವಾರ ಧರಿಸಿದ ಬ್ರಾಹ್ಮಣ ವಿದ್ಯಾರ್ಥಿಗೆ ಪರೀಕ್ಷೆ ನೀರಾಕರಣೆ | ಬ್ರಾಹ್ಮಣ ಸಮಾಜದಿಂದ ಖಂಡನೆ

# ನಮ್ಮನ್ನು ಪದೇ ಪದೇ ಕೆಣಕಬೇಡಿ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ಶಿವಮೊಗ್ಗ, ಬೀದರ್ ಜಿಲ್ಲೆಯಲ್ಲಿ ಜನಿವಾರ ಧರಿಸಿದ ಬ್ರಾಹ್ಮಣ ವಿದ್ಯಾರ್ಥಿಗಳಿಗೆ ಸಿಇಟಿ ಪರೀಕ್ಷೆ ಬರೆಯಲು ಅವಕಾಶ ನೀಡದಿರುವುದನ್ನು ಜಿಲ್ಲಾ ಬ್ರಾಹ್ಮಣ ಸಮಾಜ ಖಂಡಿಸುತ್ತದೆ. ತಪ್ಪೆಸಗಿದವರ ವಿರುದ್ಧ ಇದುವರೆಗೂ ಯಾವುದೇ ಕ್ರಮ ಕೈಗೊಳ್ಳದಿರುವುದು ಬೇಸರದ ಸಂಗತಿಯಾಗಿದೆ. ಬ್ರಾಹ್ಮಣ ಸಮಾಜದವರು ಶಾಂತ ಸ್ವಭಾವದವರಾಗಿದ್ದು, ಪರಿಸ್ಥಿತಿ ಹೀಗೆ ಮುಂದುವರಿದರೆ ಹೋರಾಟಕ್ಕೆ ಇಳಿಯಬೇಕಾಗುತ್ತದೆ ಎಂದು ಬ್ರಾಹ್ಮಣ ಸಮಾಜದ ಜಿಲ್ಲಾಧ್ಯಕ್ಷ ವೆಂಕಟೇಶ ಕುಲಕರ್ಣಿ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.




ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಬ್ರಾಹ್ಮಣ ವಿದ್ಯಾರ್ಥಿಗಳ ಪರೀಕ್ಷೆಗೆ ತಡೆಯೊಡ್ಡಿದ ಅಧಿಕಾರಿಯನ್ನು ಸೇವೆಯಿಂದ ವಜಾ ಮಾಡಬೇಕು. ಬೀದರ್‌ನಲ್ಲಿ ಜನಿವಾರ ತಗೆಯಲು ನೀರಾಕರಿಸಿದ್ದಕ್ಕೆ ಪರೀಕ್ಷೆ ಬರೆಯಲು ಅವಕಾಶ ನೀಡದಿರುವುದು ಖಂಡನೀಯ. ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಹಿಂದೂಗಳ ಭಾವನೆಗೆ ಧಕ್ಕೆ ತರುವ ಕೆಲಸ ಒಂದಿಲ್ಲೊಂದು ರೀತಿಯಲ್ಲಿ ನಡೆಯುತ್ತಿದೆ. ಸೌಮ್ಯ ಸ್ವಭಾವದವರಾದ ನಮ್ಮನ್ನು ಪದೇ ಪದೇ ಕೆಣಕಬಾರದು ಅಂತ ರಾಜ್ಯ ಸರ್ಕಾರದ ವಿರುದ್ಧ ಹರಿಹಾಯ್ದರು.

**ಕಾಂಗ್ರೆಸ್ ವಿರುದ್ಧ ಆಕ್ರೋಶ**

ಜನಿವಾರ ಧರಿಸಿದ ವಿದ್ಯಾರ್ಥಿಗಳಿಗೆ ಪರೀಕ್ಷೆ ಬರೆಯಲು ನೀರಾಕರಣೆ ಮಾಡಿದ ಘಟನೆಯನ್ನು ಖಂಡಿಸುತ್ತೇವೆ. ಇತ್ತೀಚಿನ ದಿನಗಳಲ್ಲಿ ಬ್ರಾಹ್ಮಣ ಸಮಾಜವನ್ನು ಅವಮಾನ ಮಾಡುವುದು ರೂಢಿಯೇ ಆಗಿದೆ. ಬ್ರಾಹ್ಮಣರ ಭಾವನೆಗೆ ದಕ್ಕೆ ತರುವ ಕೆಲಸ ಹೆಚ್ಚಾಗುತ್ತಿದೆ. ಜಾತಿ ಗಣತಿಯಲ್ಲೂ ರಾಜ್ಯ ಸರ್ಕಾರ ಬ್ರಾಹ್ಮಣರಿಗೆ ಮೋಸ ಮಾಡಿದೆ. ರಾಜ್ಯದಲ್ಲಿ ಮೊತ್ತಮ್ಮೆ ಜಾತಿ ಗಣತಿ ನಡೆಯಲಿ.

**- ಗುರುರಾಜ್ ಬಳಗಾನೂರ.**
ಹಿರಿಯ ಮುಖಂಡ,
ಜಿಲ್ಲಾ ಬ್ರಾಹ್ಮಣ ಸಮಾಜ.

ಜಾತಿ, ಆದಾಯ ಪ್ರಮಾಣ ಪತ್ರವನ್ನು ಬ್ರಾಹ್ಮಣರಿಗೆ ಕೇವಲ ಒಂದು ವರ್ಷಕ್ಕೆ ಮಾತ್ರ ನೀಡಲಾಗುತ್ತಿದೆ. ಜಾತಿ ಪ್ರಮಾಣ ಪತ್ರವನ್ನು ಕನಿಷ್ಠ ಐದು ವರ್ಷಕ್ಕೆ ನೀಡಬೇಕು ಹಾಗೂ ಜಾತಿ ಗಣತಿಯಲ್ಲಿ ಬ್ರಾಹ್ಮಣ ಸಮಾಜಕ್ಕೆ ಅನ್ಯಾಯವಾಗಿದೆ. ರಾಜ್ಯಾದ್ಯಂತ ಬ್ರಾಹ್ಮಣರ ಸಮಾಜ 45ರಿಂದ 50 ಲಕ್ಷ ಜನಸಂಖ್ಯೆ ಇದ್ದು, ಜಾತಿ ಗಣತಿಯಲ್ಲಿ ಕೇವಲ 14 ಲಕ್ಷ ಎಂದು ತೋರಿಸಲಾಗಿದೆ. ಈ ವರದಿಯನ್ನು ನಾವು ನಿರಾಕರಿಸುತ್ತೇವೆ. ಮುಂದಿನ ದಿನಗಳಲ್ಲಿ ಗದಗ ಜಿಲ್ಲೆಯಾದ್ಯಂತ ಬ್ರಾಹ್ಮಣ ಸಂಘದಿಂದ ಗಣತಿ ಮಾಡಲಿದ್ದೇವೆ ಎಂದು ವೆಂಕಟೇಶ ಕುಲಕರ್ಣಿ ಹೇಳಿದರು. ಈ ಸಂದರ್ಭದಲ್ಲಿ ಬ್ರಾಹ್ಮಣ ಸಮಾಜದ ತಾಲೂಕಾಧ್ಯಕ್ಷ ದತ್ತಣ್ಣ ಜೋಶಿ, ಕೃಷ್ಣಾಜೀ ಕುಲಕರ್ಣಿ, ಅನಿಲ ವೈದ್ಯ, ನಾಗರಾಜ ಗ್ರಾಮಪುರೋಹಿತ, ಗಿರೀಶ್ ಕುಲಕರ್ಣಿ, ಮಂಜುನಾಥ ಭಟ್, ಅಪ್ಪಣ್ಣಭಟ್ ಸೊರಟೂರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದಿಂದ ಅಕ್ಕನ ಜಯಂತಿ ಆಚರಣೆ

# ಅಕ್ಕಮಹಾದೇವಿ ವಚನಗಳು ಇಂದಿಗೂ ಪ್ರಸ್ತುತ

**■ವಿಜಯಸಾಕ್ಷಿ ಸುದ್ದಿ, ಗದಗ**

ನಾವು ನಡೆ-ನುಡಿ, ತನು-ಮನ, ಭಾವಗಳು ಶುಚಿಯಾಗಿರುವವರ, ಪರಿಪೂರ್ಣವಾಗಿರುವವರ ಮಾರ್ಗದರ್ಶನದಲ್ಲಿ ನಡೆದು ಇನ್ನಿತರರಿಗೂ ಮಾದರಿಯಾಗಿರಬೇಕು. ಅಂದು ಅಕ್ಕಮಹಾದೇವಿ ತಿಳಿಸಿದ ಅವರ ವಚನಗಳು ಈಗಿರುವ ಪರಿಸ್ಥಿತಿಗೆ ಸೂಕ್ತ ಮಾರ್ಗದರ್ಶಿಯಾಗಿವೆ. ಹೀಗಾಗಿ ವೈರಾಗ್ಯನಿಧಿ ಅಕ್ಕಮಹಾದೇವಿ ವಚನಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಸಮಾಜ ಸೇವಾಸಕ್ತರಾದ ಅನ್ನಪೂರ್ಣಕ್ಕ ವರವಿ ತಿಳಿಸಿದರು.



ಅವರು ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರವು ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ನಡೆಸಿದ ಅಕ್ಕನ ಜಯಂತ್ಯುತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು.

ಇಡೀ ವಿಶ್ವಕ್ಕೆ ಅಕ್ಕನಾಗಿರುವ ಅಕ್ಕಮಹಾದೇವಿ ಜನ್ಮಸ್ಥಳವಾದ ಉಡುತಡಿಯ ಅಭಿವೃದ್ಧಿ ಬಗ್ಗೆ ಚಿಂತಿಸದಿರುವುದು ಮನದಲ್ಲಿ ಕಾಡುತ್ತಿದೆ. ಆಸಕ್ತರು, ಸಂಬಂಧಿಸಿದವರಿಂದ ಉಡುತಡಿ ಅಭಿವೃದ್ಧಿ ಕುರಿತು ಸರಕಾರ ಮತ್ತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಪ್ರಯತ್ನವಾಗಬೇಕೆಂದು ವಿನಂತಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಬಸವ ಧರ್ಮಾಭಿಮಾನಿಗಳಾದ ನಂದಿನಿ ಗೊಡಚಿ ಮಾತನಾಡಿ, ಅಕ್ಕಮಹಾದೇವಿ ಜಯಂತಿ ಕೇವಲ ಅಕ್ಕನ ಬಳಗ, ಮಹಿಳಾ ಮಂಡಳ, ಸಂಘ-ಸಂಸ್ಥೆ, ಸರಕಾರಿ ಕಚೇರಿಗಳಿಗೆ ಸೀಮಿತವಾಗಿರದೆ ಶಾಲಾ-ಕಾಲೇಜುಗಳಲ್ಲಿ ಕಡ್ಡಾಯವಾಗಿ ಆಚರಿಸುವಂತಾದರೆ ಮಹಿಳೆಯರ ಮೇಲೆ ನಡೆಯುವ ದೌರ್ಜನ್ಯಗಳು ಕಡಿಮೆಯಾಗಬಹುದು ಎಂದು ಅಭಿಪ್ರಾಯಪಟ್ಟರು.

ವೇದಿಕೆಯಲ್ಲಿ ಉಪಸ್ಥಿತರಿದ್ದ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರು, ಗದಗ-ಬೆಟಗೇರಿ ನಗರಸಭೆ ಸದಸ್ಯೆ ವಿದ್ಯಾವತಿ ಗಡಗಿ, ಯೋಗ ಸಾಧಕಿ ಸುನಂದಾ ಹುಣಸಿಮರದ ಪ್ರಾಸಂಗಿಕವಾಗಿ ಮಾತನಾಡಿದರು. ಗೌರಿ ಜಿರಂಕಳಿ, ಮಹಾದೇವಿ ಚರಂತಿಮಠ, ವಿಜಯಲಕ್ಷ್ಮೀ ಮೇಕಳಿ ಅಕ್ಕನ ವಚನ ಹೇಳಿ ವಿಶ್ಲೇಷಣೆ ಮಾಡಿದರು. ಸುನಂದಾ ಜ್ಞಾನೋಪಂತರ ಅಕ್ಕನ ಚರಿತ್ರೆ ತಿಳಿಸುವ ಗೀತೆಯನ್ನು ಹಾಡಿದರು.


ಕಾರ್ಯಕ್ರಮದಲ್ಲಿ ಹಿರಿಯರಾದ ಗಿರಿಜಾ ನಾಲತ್ವಾಡಮಠ ಸಭೆಯಲ್ಲಿ ನೆರೆದ ಮಹಿಳೆಯರೆಲ್ಲರಿಗೂ ಉಡಿತುಂಬುವ ಸೇವಾ ಕಾರ್ಯ ನೆರವೇರಿಸಿದರು. ಇದೇ ಸಂದರ್ಭದಲ್ಲಿ ಸುಲೋಚನಾ ಮತ್ತು ಡಾ. ಮಲ್ಲಿಕಾರ್ಜುನ ಐಹೊಳ್ಳಿ ದಂಪತಿಗಳನ್ನು ಅವರ 40ನೇ ವರ್ಷದ ವಿವಾಹ ಮಹೋತ್ಸವದ ನಿಮಿತ್ತ ಸನ್ಮಾನಿಸಲಾಯಿತು.

ಪುಷ್ಪಾ ಹಿರೇಮಠ, ಅರುಣಾ ಇಂಗಳಳ್ಳಿ, ಪಾರ್ವತಿ ಭೂಮಾ, ಜಯಶ್ರೀ ದಾವಣಗೇರಿ, ಗಿರಿಜಾ ಅಂಗಡಿ, ಸವಿತಾ ಬೀರನೂರ, ಕವಿತಾ ಬುಳ್ಳಾ, ಅನ್ನಪೂರ್ಣ ಕೋರಿ, ಶೋಭಾ ಭಾಂಡಗೆ, ಅನ್ನಪೂರ್ಣ ಅಸೂಟಿ ಮುಂತಾದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ವೀಣಾಶ್ರೀ ಮಾಲಿಪಾಟೀಲ ಪ್ರಾರ್ಥನೆ ಹೇಳಿದರು. ಸುಲೋಚನಾ ಐಹೊಳ್ಳಿ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಜಯಶ್ರೀ ವಸ್ತ್ರದ ವಂದಿಸಿದರು.

# ಪ್ರತಿಭಟನೆಯ ಪೂರ್ವಭಾವಿ ಸಭೆ ಎ.22ಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಕೇಂದ್ರ ಬಿಜೆಪಿ ಸರಕಾರದ ಬೆಲೆ ಏರಿಕೆ ಖಂಡಿಸಿ ವಲಯವಾರು ಪ್ರತಿಭಟನೆ ಹಮ್ಮಿಕೊಳ್ಳುವ ಕುರಿತು ಎಐಸಿಸಿ ಕಾರ್ಯದರ್ಶಿ ಹಾಗೂ ರಾಜ್ಯ ಉಸ್ತುವಾರಿ ಮಯೂರ ಜಯಕುಮಾರ ನೇತೃತ್ವದಲ್ಲಿ ಎಪ್ರಿಲ್ 22ರಂದು ಸಂಜೆ 5ಕ್ಕೆ ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿನ ಗದಗ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಪೂರ್ವಭಾವಿ ಸಭೆ ಜರುಗಲಿದೆ.



ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಜಿ.ಎಸ್. ಪಾಟೀಲ ಸಭೆಯ ಅಧ್ಯಕ್ಷತೆ ವಹಿಸುವರು. ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರುಗಳು, ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ, ಎಪಿಎಂಸಿ ಪಕ್ಷದ ಅಧ್ಯಕ್ಷರು ಹಾಗೂ ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು ಹಾಗೂ ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲಿಗಲ್ ರಿಫಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಪದಾಧೀಕಾರಿಗಳು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ವಿ.ಬಿ. ಸೋಮನಕಟ್ಟಿಮಠ, ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷಬಿ.ಬಿ. ಅಸೂಟಿ ಹಾಗೂ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಮಾಜಿ ಅಧ್ಯಕ್ಷ ಅಶೋಕ ಕೆ.ಮಂದಾಲಿ ವಿನಂತಿಸಿದ್ದಾರೆ.

# ಬೇಸಿಗೆ ಸಂಭ್ರಮ ಶಿಬಿರದ ಸಮಾರೋಪ

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಮಕ್ಕಳ ಬೇಸಿಗೆ ಸಂಭ್ರಮ ಶಿಬಿರವು ಮಕ್ಕಳ ಪ್ರತಿಭೆಯನ್ನು ಹೊರತರಲು ಸಹಕಾರಿಯಾಗಿದೆ ಎಂದು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ವಿ.ಎಂ. ಹಿರೇಮಠ ಹೇಳಿದರು.




ಡಂಬಳ ಹೋಬಳಿಯ ಚುರ್ಚಿಹಾಳ ಗ್ರಾಮದ ಸರಕಾರಿ ಪ್ರಾಥಮಿಕ ಶಾಲೆಯ ಆವರಣದಲ್ಲಿ ಬೇಸಿಗೆ ಸಂಭ್ರಮ ಶಿಬಿರದಲ್ಲಿ ದೇಶೀಯ ಸಂಸ್ಕೃತಿ ಪರಿಚಯ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡಡು ಅವರು ಮಾತನಾಡಿದರು.

ವಿವಿಧ ಸಂಪನ್ಮೂಲ ವ್ಯಕ್ತಿಗಳಿಂದ ಯೋಗ, ಧ್ಯಾನ, ನೃತ್ಯ, ಚಿತ್ರಕಲೆ ಜೊತೆಗೆ ದೇಶೀಯ ಕ್ರೀಡೆಗಳಾದ ಲಗೋರಿ, ಚಿನಿಮಿನಿ ಬಿಲ್ಲಿ, ಗೋಲಿಯಂತಹ ಜಾನಪದ ಆಟಗಳನ್ನು ಮಕ್ಕಳಿಗೆ ಕಲಿಸಿಕೊಡಲಾಯಿತು. ಸಾಮೂಹಿಕ ನೃತ್ಯ, ಜಾನಪದ ಹಾಡುಗಳು, ಮೋಜಿನ ಗಣಿತ, ಸೃಜನಶೀಲ ಬರವಣಿಗೆ, ಕಥೆ, ಕವನ ರಚನೆ, ರಂಗಾಟ ಮುಂತಾದ ಸಂಸ್ಕೃತಿ, ಕಲೆಗಳನ್ನು ಮಕ್ಕಳಿಗೆ ಮೂರು ದಿನದ ಶಿಬಿರದಲ್ಲಿ ಹೇಳಿಕೊಡಲಾಯಿತು.

ಮೊದಲನೇ ದಿನ ವಾಯ್.ಎನ್. ಒಸೆಕರ ಪ್ರೌಢಶಾಲಾ ದೈಹಿಕ ಶಿಕ್ಷಕರು ಮಕ್ಕಳಿಗೆ ಏರೋಬಿಕ್ಸ್ ವ್ಯಾಯಾಮವನ್ನು ಹೇಳಿಕೊಟ್ಟರು. 2ನೇ ದಿನ ಶಿಕ್ಷಕರಾದ ಎಸ್.ಆರ್. ಬಂಡಿ ಮಕ್ಕಳಿಗೆ ಚಿತ್ರಕಲೆ ಮತ್ತು ಕಥೆಗಳನ್ನು ಹೇಳಿಕೊಟ್ಟರು. 3ನೇ ದಿನ ವಿ. ಕೂಬಳ್ಳಿ ಗುರುಮಾತೆಯರು ಧ್ಯಾನ ಮತ್ತು ಯೋಗ ಹೇಳಿಕೊಟ್ಟರು. ವಿಜಯ ಕಿರೇಸೂರು ಮತ್ತು ಚಿತ್ರಕಲಾ ಶಿಕ್ಷಕರು ಮಕ್ಕಳಿಗೆ ಪೇಪರ್ ಕಟಿಂಗ್ ಹಾಗೂ ಒರಿಗಾಮಿ ಕಲೆಯ ಪರಿಚಯ ಮಾಡಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಗುರುಗಳಾದ ಬಿ.ಬಿ. ಪುರದ, ಗ್ರಾ.ಪಂ ಸದಸ್ಯ ಸಂಗನಗೌಡ ಹುಚ್ಚನಗೌಡ್ರ, ಎಸ್.ಆರ್. ಬಂಡಿ, ಪಿ.ಬಿ. ಮುಧೋಳಮಠ, ಮೋಹನ್ ಮೆಣಸಿನಕಾಯಿ, ಬಿ.ಬಿ. ಹಡಪದ, ಗೋಡಿ ಗುರುಗಳು, ಸಂಪನ್ಮೂಲ ವ್ಯಕ್ತಿ ಎಸ್.ಎಮ್. ಪಾಟೀಲ್, ಎಸ್‌ಡಿಎಂಸಿಯ ಬಸಯ್ಯ ಗದಗಿನಮಠ, ರಾಮಪ್ಪ ಹರಣಶಿಕಾರಿ, ಸಿದ್ಧಲಿಂಗಯ್ಯ ವೀರಾಪುರ, ಗೇನಯ್ಯ ಹಿರೇಮಠ, ಹುಸೇನಸಾಬ ನದಾಫ್, ಈರಣ್ಣ ಕವಲೂರ, ಪುಟ್ಟರಾಜ ನಂದಿಹಳ್ಳಿ, ಹಿರಿಯರಾದ ಸಿದ್ಧಲಿಂಗಯ್ಯ ಭೂಸನೂರಮಠ, ಶಿವಕುಮಾರ ಗದಗಿನಮಠ, ಜಂಬಯ್ಯ ವೀರಾಪುರ, ಸಿದ್ಧರಾಮಯ್ಯ ಪಾಟೀಲ, ಪರ್ವತಗೌಡ ಹಿರೇಮಠ, ಮಲ್ಲಪ್ಪ ಮಡಿವಾಳರ, ಸಣ್ಣಅಯ್ಯನಗೌಡ್ರ ಇದ್ದರು. ಶಾಲೆಯ ಶಿಕ್ಷಕರಾದ ಆರ್.ಎಂ. ಕುಲಕರ್ಣಿ ಸ್ವಾಗತಿಸಿದರು. ಕುಮಾರ ಕೋಡಗಂಟಿ ನಿರೂಪಿಸಿದರು. ಆರ್.ಬಿ. ನದಾಫ್ ವಂದಿಸಿದರು.

# ನಿಧನ

**ಜನಾಬ ಮೌಲಾಸಾಬ ಸಿದ್ದಪೂರ**



ಗದಗ: ಕರ್ನಾಟಕ ರಾಜ್ಯ ನದಾಫ್ ಪಿಂಜಾರ ಸಂಘದ ಗದಗ ಶಹರ ಘಟಕದ ಉಪಾಧ್ಯಕ್ಷ, ಕೆ.ಎಸ್.ಆರ್.ಟಿ.ಸಿ ನಿವೃತ್ತ ಮೆಕ್ಯಾನಿಕ್ ಜನಾಬ ಮೌಲಾಸಾಬ ಸಿದ್ದಪೂರ ಪೈಗಂಬರವಾಸಿಯಾಗಿದ್ದಾರೆ.

ಮೃತರು ಪತ್ನಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು, ಅಪಾರ ಬಂಧು-ಬಳಗವನ್ನು ಬಿಟ್ಟು ಅಗಲಿದ್ದಾರೆ. ಇವರ ಜನಾಜಾ ಎ.20ರಂದು ಬೆಳಿಗ್ಗೆ 8 ಗಂಟೆಗೆ ಗದಗಿನ ಕೆ.ಎಸ್.ಆರ್.ಟಿ.ಸಿ. ಕಾಲೋನಿಯಲ್ಲಿರುವ ಮನೆಯಿಂದ ಹೊರಟು ಡಂಬಳ ನಾಕಾ ಖಬರಸ್ಥಾನದಲ್ಲಿ ನೇರವೇರುವುದು.

# ಕುರ್ತಕೋಟಿಯಲ್ಲಿ ಜರುಗಿದ ಗದಗ ತಾಲೂಕ 5ನೇ ಕನ್ನಡ ಸಾಹಿತ್ಯ ಸಮ್ಮೇಳನದ ವಿವಿಧ ದೃಶ್ಯಗಳು...










**ಎಪ್ರಿಲ್ 22ರಂದು ರಾಜ್ಯ ಸರ್ಕಾರದ ವಿರುದ್ಧ ಗದುಗಿನಲ್ಲಿ 'ಜನಾಕ್ರೋಶ ಯಾತ್ರೆ': ಸಿ.ಸಿ. ಪಾಟೀಲ**

# ಅಧಿಕಾರದ ಆಸೆಗೆ ಸಮಾಜವನ್ನು ಒಡೆಯಬಾರದು

**■ವಿಜಯಸಾಕ್ಷಿ ಸುದ್ದಿ, ಗದಗ**

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನಾಯಕತ್ವದಲ್ಲಿ ರಾಜ್ಯಾದ್ಯಂತ ಪ್ರತಿ ದಿನ 2–3 ಜಿಲ್ಲೆಗಳಲ್ಲಿ 'ಜನಾಕ್ರೋಶ ಯಾತ್ರೆ' ನಡೆಸಲಾಗುತ್ತಿದ್ದು, ಎಪ್ರಿಲ್ 22ರಂದು ಗದಗ ನಗರದಲ್ಲಿ ಯಾತ್ರೆ ನಡೆಯಲಿದೆ. ಬಸವೇಶ್ವರ ಸರ್ಕಲ್‌ನಿಂದ ಗಾಂಧಿ ಸರ್ಕಲ್‌ವರೆಗೆ ಯಾತ್ರೆ ನಡೆಯಲಿದ್ದು, ಅಂತಿಮವಾಗಿ ಗಾಂಧಿ ಸರ್ಕಲ್‌ನಲ್ಲಿ ಬಹಿರಂಗ ಸಮಾವೇಶ ನಡೆಯಲಿದೆ. ವಿರೋಧ ಪಕ್ಷದ ನಾಯಕ ಆರ್.ಅಶೋಕ, ಬಿ. ಶ್ರೀರಾಮುಲು, ಗೋವಿಂದ ಕಾರಜೋಳ ಸೇರಿದಂತೆ ಹಲವು ನಾಯಕರು ಭಾಗವಹಿಸಲಿದ್ದಾರೆ ಎಂದು ಮಾಜಿ ಸಚಿವ, ಶಾಸಕ ಸಿ.ಸಿ ಪಾಟೀಲ ಮಾಹಿತಿ ನೀಡಿದರು.



ಇಲ್ಲಿನ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿ ನಡೆಸಿ ಅವರು ಮಾತನಾಡಿದರು.

2023ರ ಚುನಾವಣೆಯಲ್ಲಿ ಪಕ್ಷ ಐದು ಗ್ಯಾರಂಟಿ ನೀಡಿ, ಜನರ ಬದುಕು ಸುಧಾರಿಸುತ್ತೇವೆ ಎಂದು ಕಾಂಗ್ರೆಸ್ ಅಧಿಕಾರಕ್ಕೆ ಬಂದಿದೆ. ಅದರಂತೆ ಪಂಚ ಗ್ಯಾರಂಟಿ ಯೋಜನೆಗೆ ವರ್ಷಕ್ಕೆ 51 ಸಾವಿರ ಕೋಟಿ ಬೇಕಾಗುತ್ತದೆ. ಅಧಿಕಾರಕ್ಕೆ ಬಂದ ನಂತರ ರಾಜ್ಯ ಸರ್ಕಾರ ಮೂರು ಪಟ್ಟು ಬೆಲೆ ಏರಿಕೆ ಮಾಡುವ ಮೂಲಕ ಸಾಮಾನ್ಯ ಜನರಿಗೆ ಬರೆ ಎಳೆದಿದ್ದಾರೆ ಎಂದು ಸಿದ್ದರಾಮಯ್ಯ ನಾಯಕತ್ವದ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು. ಬಜೆಟ್ ಪುಸ್ತಕದಲ್ಲಿ ಯಾವುದೇ ತೆರಿಗೆ ಹಾಕಲಿಲ್ಲ. ಆದರೆ, ಎಪ್ರಿಲ್ 1ರಿಂದ ದರ ಏರಿಕೆಯ ಬಿಸಿ ಮುಟ್ಟಿಸಿದ್ದು, ವಿದ್ಯುತ್ ದರದಲ್ಲಿ ಏರಿಕೆ, ಕೇವಲ ಎರಡು ವರ್ಷದ ಅವಧಿಯಲ್ಲಿ ಹಾಲಿನ ದರ 9 ರೂ ಏರಿಕೆ, ಡಿಸೆಲ್ ದರ 2 ರೂ ಏರಿಕೆ, ಶೇ. 15 ಬಸ್ ದರ ಏರಿಕೆ, ಛಾಪಾ ಕಾಗದ 20ರಿಂದ 100ಕ್ಕೆ ಏರಿಕೆ, ವೈದ್ಯಕೀಯ ದರದಲ್ಲೂ ಏರಿಕೆಯಾಗಿದೆ. ಒಟ್ಟಾರೆಯಾಗಿ ರಾಜ್ಯದಲ್ಲಿ 40 ವಸ್ತುಗಳ ಬೆಲೆ ಏರಿಕೆ ಮಾಡಲಾಗಿದೆ. ಡೀಸೆಲ್ ದರ ಏರಿಕೆಯಿಂದ ಸಾರಿಗೆ ನಿಗಮದ ಶಕ್ತಿ ಕುಂದಲಿದೆ ಎಂದು ಸರ್ಕಾರದ ವಿರುದ್ಧ ಹರಿಹಾಯ್ದರು.

ಈ ವೇಳೆ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ವಿಧಾನ ಪರಿಷತ್ ಸದಸ್ಯ ಪ್ರೊ. ಎಸ್.ವ್ಹಿ. ಸಂಕನೂರ, ನಗರಸಭೆ ಮಾಜಿ ಅಧ್ಯಕ್ಷೆ ಉಷಾ ಮಹೇಶ ದಾಸರ, ಹಿರಿಯ ಮುಖಂಡರಾದ ಎಂ.ಎಂ ಹಿರೇಮಠ, ಎಂ.ಎಸ್ ಕರಿಗೌಡ್ರ, ರಾಘವೇಂದ್ರ ಯಳವತ್ತಿ, ನಿರ್ಮಲಾ ದಶರಥ ಕೊಳ್ಳಿ, ಸಿದ್ದಣ್ಣ ಪಲ್ಲೇದ, ವಿಜಯಲಕ್ಷ್ಮೀ ದಿಂಡೂರ, ವಿದ್ಯಾವತಿ ಗಡಗಿ, ಶ್ವೇತಾ ದಂಡಿನ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

> ಹಿಂದೂ ಸಮುದಾಯದ ಎಲ್ಲ ಜಾತಿಗಳಲ್ಲಿ ಉಪ ಜಾತಿಗಳನ್ನು ಹುಡುಕಲಾಗಿದೆ. ಆದರೆ, ಮುಸಲ್ಮಾನರಲ್ಲಿ ಯಾವುದೇ ಉಪ ಜಾತಿಗಳನ್ನು ಹುಡುಕಲಿಲ್ಲ. ಇದು ಸಿದ್ದರಾಮಯ್ಯನವರ ದುರಹಂಕಾರದ ಪರಮಾವಧಿ. ಅಧಿಕಾರದ ಆಸೆಗಾಗಿ ಸಮಾಜವನ್ನು ಒಡೆಯಬಾರದು. ಸರ್ವಜನಾಂಗದ ಶಾಂತಿಯ ತೋಟವನ್ನು ಸಿಎಂ ಒಡೆಯಲು ಹೊರಟಿದ್ದಾರೆ. ಹಿಂದೆ ಲಿಂಗಾಯತ ಧರ್ಮ ಒಡೆಯಲು ಹೋಗಿ ಕಾಂಗ್ರೆಸ್ ಕೈ ಸುಟ್ಟುಕೊಂಡಿತ್ತು. ಜಾತಿ ಗಣತಿ ಮೂಲಕ ಮತ್ತೆ ಹಿಂದೂ ಧರ್ಮ ಒಡೆಯುವ ಹುನ್ನಾರ ನಡೆದಿದ್ದು, ಮುಂದಿನ ದಿನಗಳಲ್ಲಿ ಕಾಂಗ್ರೆಸ್ ತಲೆ ಎತ್ತದಂತೆ ನೆಲ ಕಚ್ಚುತ್ತದೆ.
>
> **– ಸಿ.ಸಿ. ಪಾಟೀಲ.**
> ಮಾಜಿ ಸಚಿವ, ಶಾಸಕ.

**ವಿದ್ಯಾರ್ಥಿಗೆ ಜನಿವಾರ ತೆಗೆಸಿದ ಪ್ರಕರಣ | ಶ್ರೀ ದತ್ತಭಕ್ತ ಮಂಡಳಿಯಿಂದ ಖಂಡನೆ**

# ಯಜ್ಞೋಪವೀತಕ್ಕೆ ಪವಿತ್ರ ಸ್ಥಾನವಿದೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಿಇಟಿ ಪರೀಕ್ಷೆ ಬರೆಯಲು ಬಂದಿದ್ದ ವಿದ್ಯಾರ್ಥಿಗಳ ಜನಿವಾರವನ್ನು ತೆಗೆಯಿಸಿದ್ದನ್ನು, ತೆಗೆಯಲು ಒತ್ತಾಯಿಸಿದ್ದನ್ನು ಪಟ್ಟಣದ ಶ್ರೀ ದತ್ತಭಕ್ತ ಮಂಡಳಿಯು ತೀವ್ರವಾಗಿ ಖಂಡಿಸಿದೆ.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ನಡೆದ ಖಂಡನಾ ಸಭೆಯಲ್ಲಿ ಕಾರ್ಯದರ್ಶಿ ರಘುನಾಥ ಕೊಂಡಿ ಮಾತನಾಡಿ, ಯಜ್ಞೋಪವೀತವು ಬ್ರಾಹ್ಮಣರಿಗೆ ಅತ್ಯಂತ ಪವಿತ್ರವಾದದ್ದು. ಒಮ್ಮೆ ಉಪನಯನದ ಸಮಯದಲ್ಲಿ ಧರಿಸಿದ ಜನಿವಾರವನ್ನು ಆ ವ್ಯಕ್ತಿ ತನ್ನ ಕೊನೆಯ ಉಸಿರಿರುವರೆಗೂ ಧರಿಸುತ್ತಾನೆ. ಯಜ್ಞೋಪವೀತಕ್ಕೆ ಅಂತಹ ಪವಿತ್ರ ಸ್ಥಾನವಿದೆ. ಯಾವ ಕಾರಣಕ್ಕೂ ತೆಗೆಯದ ಯಜ್ಞೋಪವೀತವನ್ನು ಪರೀಕ್ಷಾ ಸಿಬ್ಬಂದಿ ತೆಗೆಯಿಸಲು ಮುಂದಾಗಿದ್ದು ಅತ್ಯಂತ ಖಂಡನೀಯ ಸಂಗತಿ ಎಂದರು.



ಸಮಾಜದ ಹಿರಿಯರಾದ ಡಾ. ಜಿ.ಕೆ. ಕಾಳೆ ಮಾತನಾಡಿ, ಜನಿವಾರದಿಂದ ಸಿಇಟಿ ಪರೀಕ್ಷೆಗೆ ಏನು ತೊಂದರೆಯಾಗುತ್ತಿತ್ತು ಎಂಬುದು ಯಾರಿಗೂ ಅರ್ಥವಾಗದ ಸಂಗತಿ. ವಿದ್ಯಾರ್ಥಿಗಳ ಕೊರಳಲ್ಲಿನ ಜನಿವಾರವನ್ನು ತೆಗೆಯಿಸಬೇಕೆಂದು ರಕ್ಷಣಾ ಸಿಬ್ಬಂದಿಗೆ ಹೇಳಿದ್ದಾರು ಎಂಬುದು ಎಲ್ಲರಿಗೂ ತಿಳಿಯಬೇಕಿದೆ. ಶಿವಮೊಗ್ಗ ಮತ್ತು ಬೀದರ ಜಿಲ್ಲೆಗಳಲ್ಲಿ ನಡೆದಿರುವ ಈ ಕೃತ್ಯ ಅತ್ಯಂತ ಹೇಯವಾದದ್ದು. ಇಂತಹ ಆದೇಶ ಮಾಡಿದವರನ್ನು ಮೊದಲು ಪತ್ತೆ ಹಚ್ಚಿ ಅವರನ್ನು ಹುದ್ದೆಯಿಂದ ವಜಾ ಮಾಡಬೇಕು. ಪರೀಕ್ಷೆಯಿಂದ ವಂಚಿತನಾದ ವಿದ್ಯಾರ್ಥಿಗೆ ಆತ ಕೇಳುವ ಇಂಜಿನಿಯರಿಂಗ್ ಕಾಲೇಜಿನಲ್ಲಿ ಬೇಷರತ್ತಾಗಿ ಸೀಟ್ ನೀಡಬೇಕೆಂದು ಕಾಳೆ ಸರಕಾರವನ್ನು ಆಗ್ರಹಿಸಿದರು.

> ಅಧ್ಯಕ್ಷ ನಾಗರಾಜ ಗ್ರಾಮಪುರೋಹಿತ ಮಾತನಾಡಿ, ಈ ಘಟನೆಯನ್ನು ನರೇಗಲ್ಲ ಮತ್ತು ಸುತ್ತಲಿನ ಎಲ್ಲ ಗ್ರಾಮಗಳ ಬ್ರಹ್ಮ ಸಮಾಜದ ಪರವಾಗಿ ನಾವು ಖಂಡಿಸುತ್ತೇವೆ. ಬ್ರಾಹ್ಮಣರ ಬಗ್ಗೆ ಏನೇ ಮಾತನಾಡಿದರೂ, ಯಾವುದೇ ದಬ್ಬಾಳಿಕೆ ನಡೆಸಿದರೂ ನಡೆಯುತ್ತದೆ ಎನ್ನುವುದನ್ನು ಅಧಿಕಾರಶಾಹಿಗಳು ಮರೆತುಬಿಡಬೇಕು. ಇದು ಯಜ್ಞೋಪವೀತ ಧರಿಸುವ ಎಲ್ಲ ಸಮಾಜಗಳಿಗೆ ಸರಕಾರ ಮಾಡಿದ ಅನ್ಯಾಯವಾಗಿದೆ. ಇಂತವರನ್ನು ಕೂಡಲೇ ಸೇವೆಯಿಂದ ವಜಾ ಮಾಡಿ, ಸರಕಾರ ಬ್ರಹ್ಮ ಸಮಾಜ ಮತ್ತು ಯಜ್ಞೋಪವೀತ ಧರಿಸುವ ಎಲ್ಲ ಸಮಾಜಗಳ ಕ್ಷಮೆಯನ್ನು ಕೇಳಬೇಕೆಂದು ಆಗ್ರಹಿಸಿದರು.

ಶ್ರೀಪಾಧಭಟ್ಟ ಜೋಷಿ ಮಾತನಾಡಿ, ಇಷ್ಟು ವರ್ಷಗಳ ಕಾಲ ನಡೆದಿರುವ ಪರೀಕ್ಷಾ ಸಮಯದಲ್ಲಿ ಇಲ್ಲದ ಹೊಸ ನಿಯಮ ಈಗ್ಯಾಕೆ ಜಾರಿಗೆ ಬಂದಿತು ಎಂಬ ಸಂಶಯ ಕಾಡುತ್ತದೆ. ಇದನ್ನು ನರೇಗಲ್ಲದ ಬ್ರಹ್ಮ ಸಮಾಜ ಬಲವಾಗಿ ಖಂಡಿಸುತ್ತದೆ ಎಂದರು. ಸಭೆಯನ್ನುದ್ದೇಶಿಸಿ ಎ.ಜಿ. ಕುಲಕರ್ಣಿ, ಮಂಜುನಾಥ ಗ್ರಾಮಪುರೋಹಿತ, ಅರುಣ ಕುಲಕರ್ಣಿ, ಎಸ್.ಎಚ್. ಕುಲಕರ್ಣಿ, ಆದರ್ಶ ಕುಲಕರ್ಣಿ, ಆನಂದ ಕುಲಕರ್ಣಿ, ಕೆ.ಬಿ. ದೇಸಾಯಿ, ಜಗನ್ನಾಥ ಸೂರಭಟ್ಟನವರ ಮುಂತಾದವರು ಮಾತನಾಡಿದರು.

# ವಿದ್ಯಾರ್ಥಿಗಳಿಗೆ ಸಮಯಪ್ರಜ್ಞೆ ಬೇಕು



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶಿಕ್ಷಣವೇ ಶಕ್ತಿ ಎಂಬ ಪರಿಕಲ್ಪನೆಯೊಂದಿಗೆ ವಿದ್ಯಾರ್ಥಿಗಳು ಕಠಿಣ ಪರಿಶ್ರಮ, ಶ್ರದ್ಧೆ, ಏಕಾಗ್ರತೆ ರೂಢಿಸಿಕೊಂಡು ಸತತಾಭ್ಯಾಸದ ಮೂಲಕ ಉನ್ನತ ಗುರಿ ಸಾಧಿಸಬೇಕು ಎಂದು ಮಾಜಿ ಶಿಕ್ಷಣ ಸಚಿವ ಎನ್. ಮಹೇಶ ಹೇಳಿದರು

ಅವರು ಶನಿವಾರ ಪಟ್ಟಣದ ಬಾಲಾಜಿ ಹಾಸ್ಪಿಟಲ್‌ನಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಅಭಿಮಾನಿ ಬಳಗದಿಂದ ಲಕ್ಷ್ಮೇಶ್ವರ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾಗಿರುವ ಉಚಿತ ಬೇಸಿಗೆ ಶಿಬಿರದಲ್ಲಿ ವಿದ್ಯಾರ್ಥಿಗಳೊಂದಿಗೆ ಬೆರೆತು ಮಾತನಾಡುತ್ತಿದ್ದರು.

ವಿದ್ಯಾರ್ಥಿಗಳು ಗುರುಗಳು ಹೇಳಿದ ಅಂದಿನ ಪಾಠವನ್ನು ಅಂದೇ ಅಭ್ಯಾಸ ಮಾಡಬೇಕು. ವಿದ್ಯಾರ್ಥಿಗಳಿಗೆ ಸಮಯಪ್ರಜ್ಞೆ ಬೇಕು, ಅದರ ಪ್ರಕಾರ ಜೀವನ ನಡೆಸಬೇಕು. ಪ್ರತಿಯೊಂದು ಸಮಸ್ಯೆಗಳಿಗೆ ಪರಿಹಾರ ವಿದ್ಯೆದಲ್ಲಿದೆ ಎಂದು ಡಾ.ಬಿ.ಆರ್. ಅಂಬೇಡ್ಕರ್ ಹೇಳಿದ್ದರು. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಸಮಸ್ಯೆಗಳಿಗೆ ಪರಿಹಾರ ಹುಡುಕುವತ್ತ ಚಿತ್ತ ಹರಿಸಬೇಕು. ಅಂಬೇಡ್ಕರ್ ಅವರು ಬದುಕಿನುದ್ದಕ್ಕೂ ಸಾಕಷ್ಟು ಕಷ್ಟ ಅನುಭವಿಸಿದ್ದಾರೆ. ಅವರ ಪ್ರೇರಣೆಯಿಂದ ನಾವೆಲ್ಲ ಬೆಳೆಯಬೇಕಿದೆ. ವಿದ್ಯಾರ್ಥಿಗಳು ಇವತ್ತಿನ ಎಲ್ಲ ಸೌಲಭ್ಯಗಳ ಸದುಪಯೋಗಪಡಿಸಿಕೊಂಡು ಸಾಧನೆ ಮಾಡಬೇಕು.

ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ವಿದ್ಯಾರ್ಥಿಗಳು ಆಯ್ದುಕೊಂಡ ಕ್ಷೇತ್ರದಲ್ಲಿ ಶ್ರೇಷ್ಠವಾದುದನ್ನು ಸಾಧಿಸಿಲು ಏಕಾಗ್ರತೆಯಿಂದ ಶ್ರಮಿಸಬೇಕು. ನಮ್ಮ ಭವಿಷ್ಯದ ರೂಪಾರಿಗಳು ನಾವೇ ಆದ್ದರಿಂದ ಉನ್ನತ, ಶಿಕ್ಷಣ, ಜ್ಞಾನ ಮತ್ತು ನಾಯಕತ್ವದ ಗುಣ ಬೆಳೆಸಿಕೊಂಡು ಸಮಾಜಮುಖಿಯಾಗಿ ದೇಶದ ಅಭಿವೃದ್ಧಿಗೆ ಕೈ ಜೋಡಿಸಬೇಕು. ವಿದ್ಯಾರ್ಥಿ ಜೀವನದಲ್ಲಿ ಅಂದುಕೊಂಡ ಗುರಿ ಸಾದಿಸಲು ಶಿಸ್ತನ್ನು ಅಳವಡಿಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ಶಿಕ್ಷಕರು ವಿದ್ಯಾರ್ಥಿಗಳಿಗೆ ಅಭ್ಯಾಸದೊಂದಿಗೆ ಶಿಸ್ತುಬದ್ಧ ನಾಗರಿಕರನ್ನಾಗಿ ರೂಪಿಸಬೇಕೆಂದರು.

ಈ ಸಂದರ್ಭದಲ್ಲಿ ಶಾಸಕ ಡಾ. ಚಂದ್ರು ಲಮಾಣಿ, ಹುಬ್ಬಳ್ಳಿಯ ಡಾ. ಕ್ರಾಂತಿಕಿರಣ, ಸಂಘ ಪರಿವಾರದ ವಾದಿರಾಜ, ಶಿರಹಟ್ಟಿ ಮಂಡಲದ ಬಿಜೆಪಿ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ಬಿಜೆಪಿ ಮುಖಂಡ ನಾಗರಾಜ ಕುಲಕರ್ಣಿ, ಸೋಮೇಶ ಉಪನಾಳ ಸೇರಿ ಅನೇಕರಿದ್ದರು.

# ಕೆ.ಎಚ್ ಪಾಟೀಲ ಕರಿಯರ್ ಅಕಾಡಮಿಯಿಂದ ಕೃಷ್ಣಗೌಡ ಪಾಟೀಲರ ಜನ್ಮ ದಿನಾಚರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಕೆ.ಎಚ್. ಪಾಟೀಲ ಕರಿಯರ್ ಅಕಾಡೆಮಿಯ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಯವರಿಂದ ಯುವ ಮುಖಂಡ ಕೃಷ್ಣಗೌಡ ಎಚ್.ಪಾಟೀಲರ ಜನ್ಮದಿನಾಚರಣೆಯುನ್ನು ಆಚರಿಸಲಾಯಿತು.




ಈ ಸಂದರ್ಭದಲ್ಲಿ ನಿವೃತ್ತ ಪ್ರಾಚಾರ್ಯ ಡಾ. ಎಸ್.ಎಫ್. ಸಿದ್ನೆಕೊಪ್ಪ ಮಾತಾನಾಡಿ, ಕೃಷ್ಣಗೌಡರ ಕನಸಾದ ಈ ಅಕಾಡೆಮಿಯ ಆಶೋತ್ತರಗಳ ಕುರಿತು ತಿಳಿಸುತ್ತ, ಎಲ್ಲರನ್ನೂ ಸ್ವಾಗತಿಸಿದರು. ಮುಖ್ಯ ಅತಿಥಿಗಳಾದ ನರೇಗಲ್ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಪ್ರಾಚಾರ್ಯ ಡಾ. ಎಸ್.ಎಲ್. ಗುಳೇದಗುಡ್ಡ ಮಾತನಾಡಿ, ತಾವೆಲ್ಲರೂ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಹೊಂದಿ, ಉದ್ಯೋಗ ಪಡೆದುಕೊಳ್ಳುವ ಮೂಲಕ ಸುಂದರ ಜೀವನವನ್ನು ರೂಪಿಸಿಕೊಳ್ಳಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ವ್ಹಿ.ಪಿ. ಬಿಂಕದಕಟ್ಟಿ, ಪ್ರೊ. ರಘು ಕೆ.ಸಿ., ಪ್ರೊ. ವ್ಹಿ.ಡಿ. ಮುಳಗುಂದ, ಪ್ರೊ. ಎಂ.ಎಚ್. ಕರ್ಲವಾಡ, ಪ್ರೊ. ಎನ್.ಎಚ್. ಕರ್ಲವಾಡ, ಪ್ರೊ. ವಿಜಯಕುಮಾರ ದೇಸಾಯಿಗೌಡ್ರ, ಪ್ರೊ. ಶರಣು ಮರೇಗುದ್ದಿ, ಪ್ರೊ. ಬಿ.ಪಿ. ನವಲೂರಕರ, ಪ್ರೊ. ಆರ್.ಆರ್. ಕಾಶಪ್ಪನವರ, ಪ್ರೊ. ಎಂ.ಎಲ್. ಪಾಟೀಲ, ಪ್ರೊ. ಎಸ್. ಎಸ್. ಹುಲ್ಲೂರ, ಡಾ. ಪರಿಮಳಾ ವ್ಹಿ.ದೇಶಪಾಂಡೆ, ಅಶ್ವಿನಿ ಉಪ್ಪಿನ, ಪ್ರೊ. ಶಿವಾನಂದ, ಜೆಟ್ಟೆಣ್ಣವರ, ಪ್ರೊ. ಷಣ್ಮುಖ ಮತ್ತೂರ, ಪ್ರೊ. ನಿಸಾರ್‌ಅಹ್ಮದ್ ಯರಗುಡಿ, ಪ್ರೊ. ಕೆ.ಎಂ. ಶಿರೂರ, ವಿಜಯ ಮಡಿವಾಳರ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

# ಕ್ರಿಕೆಟ್ ತಂಡದ ಆಯ್ಕೆ ಪ್ರಕ್ರಿಯೆ ಎ.22ಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಗ್ರಾಮೀಣ ಅಂಡರ್–16 ಕ್ರಿಕೆಟ್ ತಂಡದ ಆಯ್ಕೆ ಪ್ರಕ್ರಿಯೆ ಎಪ್ರಿಲ್ 22ರಂದು ಬೆಳಿಗ್ಗೆ 7.30ರಿಂದ ನಗರದ ಎಚ್.ಕೆ. ಪಾಟೀಲ್ ಆಸ್ಟ್ರೋ ಟರ್ಫ್ ಮೈದಾನದಲ್ಲಿ ನಡೆಯಲಿದೆ.

ಗ್ರಾಮೀಣ ಪ್ರದೇಶದ ಆಟಗಾರರಿಗೆ ವೇದಿಕೆಯನ್ನು ಒದಗಿಸುವುದು ಈ ಉಪಕ್ರಮದ ಉದ್ದೇಶವಾಗಿದ್ದು, ಗದಗ, ಹಾವೇರಿ, ರಾಣೆಬೆನ್ನೂರು, ಗಜೇಂದ್ರಗಡ, ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ, ರೋಣ, ಮುಂಡರಗಿ, ನರಗುಂದ ಮತ್ತು ಸುತ್ತಮುತ್ತಲಿನ ಪ್ರದೇಶಗಳ ಆಟಗಾರರು ಭಾಗವಹಿಸಲು ಅರ್ಹರಾಗಿರುತ್ತಾರೆ.

ಆಟಗಾರರು ಸೆಪ್ಟೆಂಬರ್ 1, 2009ರಂದು ಅಥವಾ ನಂತರ ಜನಿಸಿರಬೇಕು. ಆಯ್ಕೆ ಪ್ರಯೋಗಗಳ ಸಮಯದಲ್ಲಿ ಡಿಜಿಟಲ್ ಜನನ ಪ್ರಮಾಣಪತ್ರ, ಹಿಂದಿನ 3 ವರ್ಷದ ಅಂಕಪಟ್ಟಿ, ವಯಸ್ಸು ಮತ್ತು ವಿಳಾಸದ ಪುರಾವೆಯಾಗಿ ಪಾಸ್‌ಪೋರ್ಟ್ ಅಥವಾ ಆಧಾರ್ ಕಾರ್ಡ್ ತರಬೇಕು. ಯಾವುದೇ ಜೆರಾಕ್ಸ್ ಪ್ರತಿಗಳನ್ನು ಸ್ವೀಕರಿಸಲಾಗುವುದಿಲ್ಲ. 14 ವರ್ಷದೊಳಗಿನ ಆಟಗಾರರು ಆಯ್ಕೆ ಪ್ರಕ್ರಿಯೆಗೆ ಹಾಜರಾಗಲು ಅರ್ಹರಲ್ಲ.

ಆಸಕ್ತ ಕ್ರಿಕೆಟಿಗರು ಬಿಳಿ ಕ್ರಿಕೆಟ್ ಉಡುಪಿನಲ್ಲಿ ಹಾಜರಾಗಲು ವಿನಂತಿಸಲಾಗಿದೆ. ಆಟಗಾರರು ನಿರ್ದಿಷ್ಟ ಕ್ಲಬ್ ಅಥವಾ ಗ್ರಾಮೀಣ ತಂಡವನ್ನು ಪ್ರತಿನಿಧಿಸಬೇಕು ಎಂದು ಆಯ್ಕೆ ಮಾಡುವ ವಿವೇಚನೆಯನ್ನು ಹೊಂದಿರುತ್ತಾರೆ. ಹೆಚ್ಚಿನ ವಿವರಗಳಿಗಾಗಿ ಮಲ್ಲಿಕಾರ್ಜುನ್ (ಮೊ: 9886466390), ಎಸ್.ಎಲ್. ಗುಳೇದಗುಡ್ಡ (ಮೊ: 9538421361) ಇವರನ್ನು ಸಂಪರ್ಕಿಸಲು ಕೆಎಸ್‌ಸಿಎ ಧಾರವಾಡ ವಲಯ ಸಂಚಾಲಕ ನಿಖಿಲ್ ಭೂಸಾದ್ ತಿಳಿಸಿದ್ದಾರೆ.

## ಇಂದು ಉದ್ಯಾನವನದಲ್ಲಿ ಉದಯರಾಗ, ಸಂಧ್ಯಾರಾಗ

**■ವಿಜಯಸಾಕ್ಷಿ ಸುದ್ದಿ, ಗದಗ**

ಭೀಷ್ಮಕೆರೆಯ ಬಸವೇಶ್ವರ ಪುತ್ಥಳಿ ಆವರಣದಲ್ಲಿ ನಡೆಯುವ ಉದ್ಯಾನವನದಲ್ಲಿ ಉದಯರಾಗ ಹಾಗೂ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ದಿ:20.04.2025ರಂದು ರವಿವಾರ ಬೆಳಿಗ್ಗೆ6.30ರಿಂದ 7.30 ರವರೆಗೆ ನಡೆಯುವ ಉದಯರಾಗ ಕಾರ್ಯಕ್ರಮದಲ್ಲಿ ಜಗನ್ನಾಥ ಕಲಬುರ್ಗಿ ಮತ್ತು ತಂಡದಿಂದ "ಸುಗಮ ಸಂಗೀತ ಹಾಗೂ ಸಾಯಂಕಾಲ: 5.30 ರಿಂದ 6.30 ಗಂಟೆಯವರೆಗೆ ನಡೆಯುವ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ವಿಜಯಕುಮಾರ ಜಿತೂರಿ ಅವರಿಂದ "ವಚನ ಸಂಗೀತ" ಕಾರ್ಯಕ್ರಮಗಳನ್ನು ಏರ್ಪಡಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ

ಪಿನ್ ಕೋಡ್ ನಂ. 582101. ದೂರವಾಣಿ: 08372–278003.
ಇ ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಭೂಬ/2025–26/141 ದಿನಾಂಕ: 19.04.2025

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ ಶ್ರೀ **ರಾಮಕೃಷ್ಣ ತಂದೆ ನಾರಾಯಣಪ್ಪ ಪಾಂಡ್ರೆ ಸಾ॥ ಗದಗ** ಈ ಕೆಳಕಂಡ ಜಮೀನನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಾಣಿಜ್ಯ ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ವಾಣಿಜ್ಯ ಚಟುವಟಿಕೆಗಳನ್ನು ನಡೆಸಲು ಹಾಗೂ ಹಲವರಿಗೆ ಉದ್ಯೋಗ ದೊರಕುತ್ತವೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾಕಾಯ್ದೆ **1961 ರ ಕಲಂ 14(ಎ)**ರಂತೆ ಭೂಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ–582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ.ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 1 | ನಾಗ ಸಮುದ್ರ | 102/*/1+2ಅ | 03ಎ–31ಗುಂ ಪೈಕಿ 00ಎ–10ಗುಂ | ಕೃಷಿ | ವಾಣಿಜ್ಯ (ಪೆಟ್ರೋಲ್ ಬಂಕ್) |
| | | 102/*/3+4ಅ | 01ಎ–00ಗುಂ ಪೈಕಿ 00ಎ–28ಗುಂ–07ಆಣೆ | | |
| ಒಟ್ಟು ಕ್ಷೇತ್ರ | | | 04ಎಕರೆ–31ಗುಂಟೆ ಪೈಕಿ 00ಎ–38ಗುಂ–07ಆಣೆ | | |

ಸಹಿ/– ಆಯುಕ್ತರು
ವಾ.ಸಾ.ಇ/ಗದಗ/30/ದೇಶಪಾಂಡೆಪಬ್ಲಿಸಿಟಿ/2025–26 ನಗರಾಭಿವೃದ್ಧಿ ಪ್ರಾಧಿಕಾರ, ಗದಗ–ಬೆಟಗೇರಿ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka